ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 204 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 29–02–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 204 | Title- Code: KARKAN 28269 | Chitradurga | Date: 29-02-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ವಿಜ್ಞಾನದ ಹಾದಿಯಲ್ಲಿ ನಾವುಗಳು ಸಾಗೋಣ; ನಾಗರಾಜ್ ಸಂಗಂ 2
7ನೇ ವೇತನ ಆಯೋಗದ ವರದಿ ಬಂದ ನಂತರ ಸಕಾರಾತ್ಮಕ ತೀರ್ಮಾನ: ಸಿಎಂ 3
ಶಾಂತಿಸಾಗರದಲ್ಲಿ ನೀರಿನ ಸಂಗ್ರಹ ಇಳಿಕೆ, ಮುಂದಿನ 20 ದಿನಗಳ ಬಳಕೆಗೆ ಲಭ್ಯ 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ: ಬಿಜೆಪಿಯಿಂದ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ







» **ಚಿತ್ರದುರ್ಗ**

ನಿನ್ನೆ ವಿಧಾನಸೌಧದಲ್ಲಿ ನಡೆದ ರಾಜ್ಯಸಭೆ ಚುನಾವಣೆಯ ನಂತರ ಡಾ.ಸೈಯದ್ ನಾಸಿರ್ ಹುಸೇನ್ ಬೆಂಬಲಿಗರು ಕರ್ನಾಟಕ ರಾಜ್ಯದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿರುವುದನ್ನು ಪ್ರತಿಭಟಿಸಿ ಬಿಜೆಪಿ ಇಂದು ಕಾಂಗ್ರೆಸ್ ಕಚೇರಿಯನ್ನು ಮುತ್ತಿಗೆ ಹಾಕುವ ಯತ್ನವನ್ನು ನಡೆಸಿತು. ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ ಪಕ್ಷದ ಮುಖಂಡರು ಬಿಜೆಪಿ ವಿರುದ್ದ ಘೋಷಣೆಗಳನ್ನು ಕೂಗುವುದರ ಮೂಲಕ ಬಿಜೆಪಿಯ ವಿರುದ್ದ ಪ್ರತಿಭಟನೆಯನ್ನು ನಡೆಸಿತು.

ಕರ್ನಾಟಕದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿರುವುದನ್ನು ಪ್ರತಿಭಟಿಸಿದ ಬಿಜೆಪಿ ಇಂದು ಕಾಂಗ್ರೆಸ್ ಕಚೇರಿಯನ್ನು ಮುತ್ತಿಗೆ ಹಾಕಲು ಯತ್ನಿಸಿತು, ಇದನ್ನು ತಡೆದ ರಕ್ಷಣಾ ಇಲಾಖೆಯವರು ಅವರನ್ನು ಕಾಂಗ್ರೆಸ್ ಕಚೇರಿ ಮುಂದೆಯೇ ನಿಲ್ಲಿಸಿದರು. ಈ ಸಮಯದಲ್ಲಿ ಕಾಂಗ್ರೆಸ್ ಸರ್ಕಾರ ಮತ್ತು ಪಕ್ಷದ ವಿರುದ್ದ ಘೋಷಣೆಗಳನ್ನು ಕೂಗಿದ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಪಕ್ಷ ಮತ್ತು ಸರ್ಕಾರ ದೇಶ ದ್ರೋಹಿಗಳಿಗೆ ಬೆಂಬಲ ನೀಡುತ್ತಿದೆ, ನಮ್ಮ ದೇಶದ ಒಳಗಡೆ ಅವರಿಗೆ ಸಹಕಾರ ನೀಡುತ್ತಿದೆ ಎಂದು ದೂರಿದರು.

ವಿಧಾನಸೌಧದಲ್ಲಿ ರಾಜ್ಯಸಭೆ ಸದಸ್ಯ ಸೈಯದ್ ನಾಸೀರ್ ಹುಸೇನ್ ಬೆಂಬಲಿಗರು ಪಾಕಿಸ್ಥಾನ್ ಜಿಂದಾಬಾದ್ ಘೋಷಣೆ ಕೂಗಿದ್ದಾರೆ ಎಂದು ಆರೋಪಿಸಿ ಬಿಜೆಪಿ ಕಾರ್ಯಕರ್ತರು ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಲು ಯತ್ನಿಸಿದರು. ತಕ್ಷಣ ಸ್ಥಳಕ್ಕಾಗಮಿಸಿದ ಪೊಲೀಸರು ಕಾಂಗ್ರೆಸ್ ಕಚೇರಿ ಸುತ್ತಾ ಬ್ಯಾರಿಕೇಡ್ ಅಳವಡಿಸಿ ಬಿಜೆಪಿ ಕಾರ್ಯಕರ್ತರನ್ನು ತಡೆದರು. ಈ ವೇಳೆ ಬಿಜೆಪಿ ಕಾರ್ಯಕರ್ತರು, ಕಾಂಗ್ರೆಸ್ ಕಚೇರಿಯ ಎದುರಿನಲ್ಲಿ ನಿಂತು ದೇಶದ್ರೋಹಿಗಳಿಗೆ ಬಂಬಲ ನೀಡುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಧಿಕ್ಕಾರ ಎಂದು ಕೂಗಿದರು.

ರಸ್ತೆಯಲ್ಲಿ ಕೂಗುತ್ತಿದ್ದವರು ಈಗ ವಿಧಾನಸೌಧದಲ್ಲಿ ಇದ್ದಾರೆ. ಪಾಕಿಸ್ತಾನಿಯರು ವಿಧಾನಸೌಧ ಒಳಗೆ ಸೇರಿಕೊಂಡ ಕೀರ್ತಿ ಕಾಂಗ್ರೆಸ್ ಪಕ್ಷಕ್ಕೆ ಮತ್ತು ಬಿಟ್ಟಿ ಗ್ಯಾರೆಂಟಿ ಭಾಗ್ಯಕ್ಕೆ ಮತ ನೀಡಿದ ಮಹಾನ್ ಮತದಾರರಿಗೆ ಸಲ್ಲುತ್ತದೆ ಕಾಂಗ್ರೆಸ್ ಸರ್ಕಾರದ ಹಿಂದೂ ನೀತಿಯನ್ನು ವಿರೋಧಿಸಿದರು. ಕಾಂಗ್ರೆಸ್ ಪಕ್ಷ ಈ ರೀತಿಯಾದ ಹಲವಾರು ವಿಷ ಜಂತುಳನ್ನು ಸಾಕಿಕೊಂಡಿದೆ. ಸೈಯದ್ ನಾಸೀರ್ ಹುಸೇನ್ ರವರ ಹಿಂದೆ ಇರುವ ಬೆಂಬಲಿಗರು ಪಾಕಿಸ್ತಾನಿ ಬೆಂಬಲಿತ ಉಗ್ರರೇ ಇರಬೇಕಿದೆ ಎಂದು ದೂರಿದರು.

ಈ ವೇಳೆ ಪ್ರತಿಕ್ರಿಯೆಯಾಗಿ ಕಾಂಗ್ರೆಸ್ ಕಾರ್ಯಕರ್ತರು ಕೂಡಾ ಭಾರತ್ ಮಾತಾ ಕೀ ಜೈ, ಕೋಮುವಾದಿ ಬಿಜೆಪಿಗೆ ಧಿಕ್ಕಾರ, ಮನುವಾದಿ ಬಿಜೆಪಿ ಪಕ್ಷಕ್ಕೆ ಧಿಕ್ಕಾರ ಎಂದು ಕೂಗಿದರು. ಈ ವೇಳೆ ಎರಡೂ ಕಡೆಗಳಲ್ಲೂ ಪ್ರತಿಭಟನೆ ತಾರಕ್ಕೇರಿತು. ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಕಚೇರಿಗೆ ನುಗ್ಗಲು ಯತ್ನಿಸಿದರು. ಬಿಜೆಪಿ ಕಾರ್ಯಕರ್ತರು ದೇಶವಿರೋಧಿ ಕಾಂಗ್ರೆಸ್ ಪಕ್ಷಕ್ಕೆ ಧಿಕ್ಕಾರ ಎಂದು ಕೂಗಿದರು. ಗಾಂಧೀಜಿಯವರನ್ನು ಕೊಂದ ಗೊಡ್ಸೆ ವಂಶದವರು ನೀವು ಭಯೋತ್ಪಾದಕರನ್ನು ಕಂದಹಾರನಲ್ಲಿ ಬಿಡುಗಡೆ ಮಾಡಿದವರು ನೀವು, ಪಾಕಿಸ್ತಾನದ ಪ್ರಧಾನ ಮಂತ್ರಿ ನಿವಾಸಕ್ಕೆ ಹೋಗಿ ಆಹಾರವನ್ನು ಸೇವನೆ ಮಾಡಿದವರು ನೀವು ಎಂದು ಅವರ ಮೇಲೆಯೂ ಸಹಾ ಮಾತಿನ ವಾಗ್ದಾಳಿಯನ್ನು ನಡೆಸಿದರು.

ಒಂದು ಹಂತದಲ್ಲಿ ಪ್ರತಿಭಟನೆ ಬೀದಿ ಜಗಳದಂತಾಯಿತು. ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರನ್ನು ಚದುರಿಸಲು ಪೊಲೀಸರು ಹರಸಾಹಸ ಮಾಡಿದರು. ಪ್ರತಿಭಟನಾಕಾರರನ್ನು ನಿಯಂತ್ರಿಸಲು ಮುಂದಾದ ಪೊಲೀಸರು, ಬಿಜೆಪಿ ಕಾರ್ಯಕರ್ತರನ್ನು ಚದುರಿಸಲು ಅಲ್ಲಿಂದ ತಳ್ಳಲು ಮುಂದಾದರು. ಈ ವೇಳೆ ಬಿಜೆಪಿ ಯುವಮೋರ್ಚಾ ರಾಜ್ಯ ಕಾರ್ಯದರ್ಶಿ ಭಾರ್ಗವಿ ದ್ರಾವಿಡ್ ನೆಲಕ್ಕೆ ಬಿದ್ದರು. ಮಹಿಳಾ ಪೊಲೀಸ್ ಪೇದೆಯೊಬ್ಬರು ಏಕಾಏಕಿ ತಳ್ಳಿದ್ದರಿಂದ ನೆಲಕ್ಕೆ ಬಿದ್ದ ಭಾರ್ಗವಿ ಕ್ಷಣ ಕಾಲ ಮೇಲೆ ಏಳಲಿಲ್ಲ. ಆನಂತರ ನೀರು ಕುಡಿಸಿ ಅಲ್ಲಿಂದ ಜಿಲ್ಲಾ ಆಸ್ಪತ್ರೆಗೆ ಕರೆದೊಯ್ದು ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

ಪ್ರತಿಭಟನೆಯಲ್ಲಿಬಿಜೆಪಿಮುಖಂಡರಾದ ನರೇಂದ್ರ ಹೊನ್ನಾಳ್, ದಗ್ಗೆ ಶಿವಪ್ರಕಾಶ್, ತಿಪ್ಪೇಸ್ವಾಮಿ, ಯುವಮೋರ್ಚಾ ಮಂಡಲ ಅಧ್ಯಕ್ಷ ರಾಮು, ನವೀನ್, ವೀಣಾ, ಶೀಲಾ, ಶೈಲಜಾ ರೆಡ್ಡಿ, ಪವನ, ಪರಶುರಾಮ್, ಪಲ್ಲವಿ ಪ್ರಸನ್ನ, ರವಿ ಪೈಲೆಟ್, ಪ್ರಭು ಮತ್ತಿತರರಿದ್ದರು.ಕಾಂಗ್ರೇಸ್ ಪಕ್ಷದಿಂದ ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಜಿ.ಪಂ.ಮಾಜಿ ಸದಸ್ಯ ಪ್ರಕಾಶ್ ಮೂರ್ತಿ ಹಿಂದುಳಿದ ಘಟಕದ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್, ಮುದಸಿರ್, ನೇತಾಜಿ. ಲಕ್ಷ್ಮೀಕಾಂತ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮಾರ್ಚ್ 01ರಂದು ಯುವ ಸೌರಭ ಕಾರ್ಯಕ್ರಮ

» **ಚಿತ್ರದುರ್ಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಯುವ ಸೌರಭ ಕಾರ್ಯಕ್ರಮವನ್ನು ಮಾರ್ಚ್ 01ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ತಾಲ್ಲೂಕಿನ ಗುಡ್ಡದರಂಗವ್ವನಹಳ್ಳಿಯ ದಾವಣಗೆರೆ ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಆಯೋಜಿಸಲಾಗಿದೆ. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಕಾರ್ಯಕ್ರಮ ಉದ್ಘಾಟಿಸುವರು. ದಾವಣಗೆರೆ ವಿಶ್ವವಿದ್ಯಾನಿಲಯ ಉಪಕುಲಪತಿ ಪ್ರೊ. ಬಿ.ಡಿ.ಕುಂಬಾರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ದಾವಣಗೆರೆ ವಿವಿ ಕುಲಚಿವ ವೆಂಕಟರಾವ್ ಎಂ.ಪಲಾಟೆ, ಪರೀಕ್ಷಾಂಗ ಕುಲಸಚಿವ ಸಿ.ಕೆ.ರಮೇಶ್, ಹಣಕಾಸು ಅಧಿಕಾರಿ ದ್ಯಾಮನಗೌಡ್ರು ಮುದ್ದನಗೌಡ್ರು, ಚಿತ್ರದುರ್ಗ ಸ್ನಾತಕೋತ್ತರ ಅಧ್ಯಯನ ಕೇಂದ್ರ ಸಂಯೋಜನಾಧಿಕಾರಿ ಡಾ.ಎಂ.ಯು.ಲೋಕೇಶ್, ಕನ್ನಡ ಅಧ್ಯಯನ ವಿಭಾಗ ವಿಷಯ ಸಂಯೋಜಕ ಡಾ.ಹೆಚ್.ಜಿ.ವಿಜಯಕುಮಾರ್ ಭಾಗವಹಿಸುವರು. ಯುವ ಸೌರಭ ಕಾರ್ಯಕ್ರಮದ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದ್ದು, ಚಿತ್ರದುರ್ಗ ಮೈಲಾರಿ ಮತ್ತು ತಂಡದವರಿಂದ ಜನಪದ ಗೀತೆಗಳು, ಹಿರಿಯೂರಿನ ನಾಗಶ್ರೀ ಭಟ್ ಅವರಿಂದ ಸಮೂಹ ನೃತ್ಯ, ಚಿತ್ರದುರ್ಗದ ಅಫ್ರೀನ್ ಕೌಸರ್ ಮತ್ತು ಸಂಗಡಿಗರಿಂದ ಸುಗಮ ಸಂಗೀತ, ಚಿತ್ರಹಳ್ಳಿಯ ಎನ್.ಹನುಮಂತ ಮತ್ತು ತಂಡದಿಂದ ನಾಸಿಕ್ ಡೋಲು, ಎಂ.ಕೆ. ಹಟ್ಟಿಯ ಕೆ.ಮನು ಮತ್ತು ತಂಡದಿಂದ ಕಹಳೆ ವಾಹನ ಹಾಗೂ ಗೋನೂರಿನ ಆಕಾಶ್ ಮತ್ತು ತಂಡದಿಂದ "ಕೋಟು" ಹಾಸ್ಯ ನಾಟಕ ಪ್ರದರ್ಶನವಿದೆ. ಅಂದು ಬೆಳಿಗ್ಗೆ 10ಕ್ಕೆ ದಾವಣಗೆರೆ ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಮುಖ್ಯದ್ವಾರದಿಂದ ಸಭಾಂಗಣದವರೆಗೆ ಮೆರವಣಿಗೆ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### ಬಾಲನಟರ ಪಾತ್ರಕ್ಕಾಗಿ ಮಕ್ಕಳ ಬಳಕೆ: ಡಿಸಿ ಅನುಮತಿ ಕಡ್ಡಾಯ

» **ಚಿತ್ರದುರ್ಗ**

ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ತಿದ್ದುಪಡಿ ಕಾಯ್ದೆ, 2016ರನ್ವಯ ಕರ್ನಾಟಕ ನಿಯಮಗಳು "2ಸಿ"ರಲ್ಲಿ ಮಗು (1) ಕಲಂ 3ರ ನಿಬಂಧನೆಗಳು ಜಾರಿಯಲಿದ್ದು, ಈ ನಿಯಮಾನುಸಾರ ಬಾಲ ನಟರು ಹಾಗೂ ಬಾಲ ನಟಿಯರ ಪಾತ್ರಕ್ಕಾಗಿ ಮಕ್ಕಳನ್ನು ಬಳಸಿಕೊಳ್ಳಲು ಇಚ್ಛಿಸುವ ಸಿನಿಮಾ ಅಥವಾ ಧಾರವಾಹಿ ನಿರ್ದೇಶಕರು, ನಿರ್ಮಾಪಕರು, ಇಲ್ಲವೆ ಆಯೋಜಕರು ಕಡ್ಡಾಯವಾಗಿ ಜಿಲ್ಲಾಧಿಕಾರಿಗಳ ಅನುಮತಿ ಪತ್ರ ಪಡೆಯುವುದು ಕಡ್ಡಾಯ.ಮಕ್ಕಳನ್ನು ಬಳಸಿ ಸಂಪೂರ್ಣ ಚಿತ್ರೀಕರಣ ಮಾಡುವ ಸಂದರ್ಭದಲ್ಲಿ ಮಕ್ಕಳ ದುರುಪಯೋಗ ಪ್ರಕರಣ, ನಿರ್ಲಕ್ಷ್ಯ, ಶೋಷಣೆ ನಡೆಯದಂತೆ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಮಕ್ಕಳು ನಿರಂತರವಾಗಿ 27 ದಿನಗಳಿಗಿಂತ ಹೆಚ್ಚಿನ ದಿನಗಳು ನಟನಾ ಕೆಲಸದಲ್ಲಿ ತೊಡಗಲು ಅವಕಾಶ ನೀಡಬಾರದು. ಪ್ರತಿ 5 ಮಕ್ಕಳಿಗೆ ಒಬ್ಬರಂತೆ ಜವಾಬ್ದಾರಿ ವ್ಯಕ್ತಿಯನ್ನು ನೇಮಿಸುವುದು. ಮಕ್ಕಳ ನಟನಾ ಕೆಲಸದ ಚಟುವಟಿಕೆ ನಟನೆಗೆ ಭಾಗವಹಿಸುವ ಮಕ್ಕಳ ಪೋಷಕರ, ಪಾಲಕರ ಒಪ್ಪಿಗೆ ಪತ್ರವನ್ನು ಪಡೆದು ಸಿನಿಮಾ ಅಥವಾ ಧಾರವಾಹಿ ನಿರ್ದೇಶಕರು, ನಿರ್ಮಾಪಕರು, ಇಲ್ಲವೆ ಆಯೋಜಕರು ಕಡ್ಡಾಯವಾಗಿ ಪ್ರದೇಶ ಕಾರ್ಯವ್ಯಾಪ್ತಿಯ ಜಿಲ್ಲಾ ದಂಡಾಧಿಕಾರಿಗಳ ಪೂರ್ವಾನುಮತಿಯೊಂದಿಗೆ ಮುಚ್ಚಳಿಕೆ ಪತ್ರವನ್ನು ಮತ್ತು ನಮೂನೆ "ಸಿ" ಯಲ್ಲಿ ಜಿಲ್ಲಾ ದಂಡಾಧಿಕಾರಿಗಳಿಗೆ ಸಲ್ಲಿಸಬೇಕು ಎಂದು ಜಿ.ಇಬ್ರಾಹಿಂ ಸಾಬ್ ತಿಳಿಸಿದ್ದಾರೆ.

## ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದನಾರಾಯಣ ಸ್ವಾಮಿಗೆ ಸನ್ಮಾನ

» **ಚಿತ್ರದುರ್ಗ**

ಚಳ್ಳಕೆರೆ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಟಿ.ರಘುಮೂರ್ತಿ , ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಆಹಾರ ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ ಅವರೊಂದಿಗೆ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಎಲ್.ನಾರಾಯಣ ಸ್ವಾಮಿ ಅವರನ್ನು ಭೇಟಿಯಾಗಿ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಹೆಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಮತ್ತು ಇತರರು ಇದ್ದರು.



## ನಟ ಕೆ.ಶಿವರಾಮ್ ಸ್ಥಿತಿ ಗಂಭೀರ



ಕನ್ನಡದಲ್ಲಿ ಐಎಸ್ ಎಸ್ (ಐಎಎಸ್) ಮಾಡಿದ ಮೊದಲ ಅಧಿಕಾರಿ ಹಾಗೂ ಬಾ ನಲ್ಲೆ ಮಧುಚಂದ್ರಕೆ ಸೇರಿದಂತೆ ಅನೇಕ ಸಿನಿಮಾಗಳಲ್ಲಿ ನಾಯಕರಾಗಿ (ನಟ) ನಟಿಸಿರುವ ಕೆ.ಶಿವರಾಮ್ (ಕೆ.ಶಿವರಾಮ್) ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂಬ ಮಾಹಿತಿ ಇದೆ. ಅನಾರೋಗ್ಯದಿಂದ ಅವರನ್ನು ಖಾಸಗಿ ಆಸ್ಪತ್ರೆಗೆ ಸೇರಿಸಲಾಗಿದೆ. ಹಲವು ದಿನಗಳಿಂದ ಅವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಮೂಲಗಳ ಪ್ರಕಾರ.ಸಿ.ಜಿ ಆಸ್ಪತ್ರೆಯಲ್ಲಿ ಅವರಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಪರಿಸ್ಥಿತಿ ಚಿಂತಾಜನಕವಾಗಿದ್ದು, ಐಸಿಯುವಿನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಎಚ್ಚೆತ್ತುಕೊಳ್ಳಲಾಗುತ್ತಿದೆ. ಕನ್ನಡದಲ್ಲೇ ಐಎಎಸ್ ಬರೆದು, ನಂತರ ಬೆಂಗಳೂರು, ವಿಜಯಪುರ, ಕೊಪ್ಪಳ ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಅವರು ಕೆಲಸ ಮಾಡಿದ್ದಾರೆ. ನಂತರ ಬಾ ನಲ್ಲೆ ಮಧುಚಂದ್ರಿಕೆ, ವಸಂತ ಕಾವ್ಯದಂತಹ ಚಿತ್ರಗಳಲ್ಲಿ ನಾಯಕರಾಗಿ ನಟಿಸಿದ್ದಾರೆ.

**ಪ್ರಮುಖ ಸುದ್ದಿ**

### ಲೋಕಸಭಾ ಕಣಕ್ಕೆ ನಿವೃತ್ತ ಜಿಲ್ಲಾಧಿಕಾರಿ ಪ್ರವೇಶ

# ನಾನು ಬಿಜೆಪಿಯ ಟಿಕೆಟ್ ಆಕಾಂಕ್ಷಿ: ಶ್ರೀರಂಗಯ್ಯ

» **ಚಿತ್ರದುರ್ಗ**



ಚಿತ್ರದುರ್ಗ ಜಿಲ್ಲಾಧಿಕಾರಿಯಾಗಿ ಹಲವಾರು ಜನಪರ ಕೆಲಸವನ್ನು ಮಾಡಿದ್ದೇನೆ, ನನ್ನ ಅಭಿಮಾನಿಗಳು ಹಿತೈಷಿಗಳು ರಾಜಕೀಯಕ್ಕೆ ಬನ್ನಿ ಎಂಬ ಒತ್ತಾಯದ ಮೇರೆಗೆ ರಾಜಕೀಯಕ್ಕೆ ಬರುತ್ತಿದ್ದು, ಈ ಬಾರಿ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಭಾರತೀಯ ಜನತಾ ಪಾರ್ಟಿಯಿಂದ ಟಿಕೆಟ್ ಕೇಳಿದ್ದೇನೆ, ಅದರೆ ಪಕ್ಷದ ವರಿಷ್ಠರು ಯಾವುದೇ ರೀತಿಯ ಭರವಸೆ ನೀಡಿಲ್ಲ ಎಂದು ನಿವೃತ್ತ ಜಿಲ್ಲಾಧಿಕಾರಿ ಶ್ರೀರಂಗಯ್ಯ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗ ಜಿಲ್ಲಾಧಿಕಾರಿಯಾಗಿ 2014ರಲ್ಲಿ ಕೆಲಸವನ್ನು ಮಾಡಿದ್ದೇನೆ. ಇಲ್ಲಿನ ಹಲವರು ಸಮಸ್ಯೆಗಳಿಗೆ ಪರಿಹಾರವನ್ನು ಕಂಡು ಹಿಡಿದಿದ್ದೇನೆ. ಇದ್ದಲ್ಲದೆ ಹಲವಾರು ಜನತೆಯ ವಿವಿಧ ರೀತಿಯ ಸಮಸ್ಯೆಯನ್ನು ಬಗೆಹರಿಸಿದ್ದೇನೆ, ಇದರೊಂದಿಗೆ ಚಿತ್ರದುರ್ಗ ಜಿಲ್ಲೆಯ ಆರು ತಾಲ್ಲೂಕುಗಳ ಪರಿಚಯವಿದ್ದು, ಅಲ್ಲಿನ ಜನತೆಯ ನಡುವೆ ಒಡನಾಟ ಇದೆ ಎಂದರು. ಜನಪ್ರತಿನಿಧಿಗಳೊಂದಿಗೆ ಉತ್ತಮವಾದ ಬಾಂಧವ್ಯವನ್ನು ಹೊಂದಿದ್ದೇನೆ. 2014ರಲ್ಲಿ ವಿವಿಧ ರೀತಿಯ ಚುನಾವಣೆಯನ್ನು ಮಾಡಿದ್ದೇನೆ. ಚಿತ್ರದುರ್ಗ ಲೋಕಸಭಾ 8 ಕ್ಷೇತ್ರಗಳ ಪರಿಚಯವಿದ್ದು, ಇಲ್ಲಿನಾ ಆಗು ಹೋಗುಗಳನ್ನು ತಿಳಿದಿದ್ದೇನೆ. ಇದರಿಂದ ಈ ಬಾರಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಸ್ಪರ್ಧೆ ಮಾಡಲು ತೀರ್ಮಾನ ಮಾಡಿದ್ದೇನೆ ಎಂದು ತಿಳಿಸಿದರು.ಬಿಜೆಪಿಯ ವರಿಷ್ಠರನ್ನು ಹಲವಾರು ಭೇಟಿಯಾಗಿದ್ದೇನೆ. ನನಗೆ ಟೀಕೇಟ್ ನೀಡುವಂತೆ ಮನವಿ ಮಾಡಿದ್ದೇನೆ. ಈಗ ಹಾಲಿ ಸಂಸದರು ನಾನು ಸ್ಪರ್ಧೆ ಮಾಡುವುದಿಲ್ಲ ಎಂದು ಹೇಳಿದ್ದಾರೆ. ಇದರಿಂದ ನಾನು ಕಣಕ್ಕೆ ಇಳಿದಿದ್ದೇನೆ, ಈ ಕ್ಷೇತ್ರದಲ್ಲಿ ಮಾದಿಗ ಎಡಗೈ ಸಮುದಾಯದವರ ಸುಮಾರು 4 ರಿಂದ 5 ಲಕ್ಷ ಮತದಾರರಿದ್ದಾರೆ. ಈಗಾಗಲೇ ಒಂದು ಬಾರಿ ಕ್ಷೇತ್ರದ ನಾಯಕರನ್ನು ಭೇಟಿ ಮಾಡಿದ್ದೇನೆ.

ಇನ್ನು ಮತದಾರರನ್ನು ಭೇಟಿ ಮಾಡಿಲ್ಲ. ಮುಂದಿನ ದಿನದಲ್ಲಿ ಅವರನ್ನು ಸಹಾ ಭೇಟಿ ಮಾಡುವುದರ ಮೂಲಕ ಜಿಲ್ಲಾಧಿಕಾರಿಯಾಗಿದ್ದಾಗ ನಾನು ಮಾಡಿದ ವಿವಿಧ ರೀತಿಯ ಕೆಲಸಗಳನ್ನು ಅವರಿಗೆ ತಿಳಿಸಿಕೊಡಲಾಗುವುದು ಎಂದರು.

ಬಿಜೆಪಿ ಪಕ್ಷದಲ್ಲಿ ನಾನು ಟಿಕೆಟ್ ಕೇಳಿದ್ದೇನೆ. ಪಕ್ಷ ತೀರ್ಮಾನ ಮಾಡಿ ನನಗೆ ಟಿಕೆಟ್ ನೀಡಿದರೆ ಸ್ಪರ್ಧೆ ಮಾಡುತ್ತೇನೆ. ಇಲ್ಲವಾದಲ್ಲಿ ಕಾರ್ಯಕರ್ತನಾಗಿ ಪಕ್ಷ ಯಾರಿಗೆ ಟಿಕೆಟ್ ನೀಡುತ್ತದೆಯೋ ಅವರ ಪರವಾಗಿ ಕೆಲಸವನ್ನು ಮಾಡುತ್ತೇನೆ. ನಾನು ಸಹಾ ಸ್ಥಳಿಯನಾಗಿದ್ದೇನೆ, ಹೊರಗಿನಿಂದ ಬಂದವನಲ್ಲ, ಗಡಿ ಪ್ರದೇಶದಲ್ಲಿ ನಮ್ಮ ಪರಿವಾರ ಇದೆ ಎಂದು ಸ್ಪಷ್ಟಪಡಿಸಿದರು.

ತಾಲ್ಲೂಕು ಪಂಚಾಯಿ ಮಾಜಿ ಸದಸ್ಯ ಮೋಹನ್, ಗ್ರಾಮ ಪಂಚಾಯಿತಿ ಸದಸ್ಯ ರಂಗಯ್ಯ ಉಪಸ್ಥಿತರಿದ್ದರು.





## ಫಾಸ್ಟ್ ನ್ಯೂಸ್

### ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ತೋಟಗಾರಿಕೆ ಇಲಾಖೆಯ ಅಧೀನದ ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಹೋಬಳಿ ವ್ಯಾಪ್ತಿಯ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಏಪ್ರಿಲ್ 01 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ತರಬೇತಿ ಅರ್ಜಿಗಳನ್ನು ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಚಿತ್ರದುರ್ಗ ಕಚೇರಿಯಲ್ಲಿ ಅಥವಾ ಇಲಾಖೆಯ ವೆಬ್‌ಸೈಟ್ https://horticulturedir.karnataka.gov.in ನಲ್ಲಿ ಮಾರ್ಚ್ 01 ರಿಂದ ಮಾರ್ಚ್ 30 ರವರೆಗೆ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದೆ. ಆಯ್ಕೆಯಾದ ಶಿಬಿರಾರ್ಥಿಗಳಿಗೆ ಜಿಲ್ಲೆಯ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ವಸತಿ ಸಹಿತ ತರಬೇತಿ ನೀಡಲಾಗುವುದು. ಮಾಜಿ ಸೈನಿಕ ಅಭ್ಯರ್ಥಿಗಳು ಆಯ್ಕೆಗೊಂಡಲ್ಲಿ ಈ ಅಭ್ಯರ್ಥಿಗಳಿಗೆ ಉಚಿತವಾಗಿ ಕಲಿಕೆಯ ಎಲ್ಲಾ ತರಹದ ಅವಕಾಶಗಳನ್ನು ಕಲ್ಪಿಸಲಾಗುವುದು. ಆದರೆ ವಸತಿ ನಿಲಯದಲ್ಲಿ ವಾಸ್ತವ್ಯದ ವ್ಯವಸ್ಥೆ ಕಡ್ಡಾಯ ಇರುವುದಿಲ್ಲ ಹಾಗೂ ಶಿಷ್ಯವೇತನಕ್ಕೆ ಅವಕಾಶವಿರುವುದಿಲ್ಲ. ತರಬೇತಿಗೆ ಒಟ್ಟು 15 ಅಭ್ಯರ್ಥಿಗಳ ಆಯ್ಕೆ ಮಾಡುವ ಗುರಿ ನಿಗಧಿಪಡಿಸಲಾಗಿದೆ. ಮೆರಿಟ್ ಆಧಾರದ ಮೇಲೆ ಸರ್ಕಾರದ ಮೀಸಲಾತಿ ನಿಯಮಾನುಸಾರ ಆಯ್ಕೆ ವಿಧಾನ ನಡೆಯಲಿದೆ. ಅಭ್ಯರ್ಥಿಗಳು ಕನಿಷ್ಠಎಸ್.ಎಸ್.ಎಲ್.ಸಿ.ಉತ್ತೀರ್ಣವಾಗಿರಬೇಕು. ತರಬೇತಿ ಬಯಸುವ ಅಭ್ಯರ್ಥಿಯ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು ಹಾಗೂ ಸ್ವಂತ ಜಮೀನನ್ನು ಸಾಗುವಳಿ ಮಾಡುತ್ತಿರಬೇಕು. ಮಾಜಿ ಸೈನಿಕರ ತರಬೇತಿಯನ್ನು ಪಡೆಯಲು ಇಚ್ಛಿಸಿದ್ದಲ್ಲಿ ಡಿಸ್‌ಜಾರ್ಜ್ ಬುಕ್, ಪರ್ಸನಲ್ ಪೆನ್ಶನ್ ಆರ್ಡರ್ ಕಾಪಿ, ಎಕ್ಸ್ ಸರ್ವಿಸ್ ಮ್ಯಾನ್ ಐಡಿ ಕಾರ್ಡ್ ಕಾಪಿ, ಇತ್ಯಾದಿಗಳನ್ನ ಸಲ್ಲಿಸಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ 18 ವರ್ಷ ದಿಂದ 33 ವರ್ಷ, ಮಾಜಿ ಸೈನಿಕರಿಗೆ 33 ವರ್ಷ ದಿಂದ 65 ವರ್ಷ ವಯಸ್ಸಿನವರಾಗಿರಬೇಕು.ತರಬೇತಿಗೆಆಯ್ಕೆಯಾದ ಅಭ್ಯರ್ಥಿಗಳಿಗೆ ರೂ.1750/–ಗಳ ಮಾಸಿಕ ಶಿಷ್ಯ ವೇತನ ನೀಡಲಾಗುವುದು. ಸಾಮಾನ್ಯ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.30, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.15 ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ ಅಥವಾ ಡಿಮ್ಯಾಂಡ್ ಡ್ರಾಫ್ಟ್ (ಆಳ)/ ಏ–2 Palyment Challan C£ÀAß Deputy Director of Horticulture (ZP) Chitradurga ಹೆಸರಿನಲ್ಲಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಚಿತ್ರದುರ್ಗ ಕಚೇರಿಗೆ ಏಪ್ರಿಲ್ 01ರ ಸಂಜೆ 5.30 ಗಂಟೆಯೊಳಗೆ ಅರ್ಜಿ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ದೂ:08194–230895, 9980991048 ಅನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಫೆ.29 ಮತ್ತು ಮಾರ್ಚ್ 01ರಂದು ಸೂಕ್ಷ್ಮ ಮತ್ತು ತುಂತುರ ನೀರಾವರಿ ಘಟಕಗಳ ಅಳವಡಿಕೆ ಕುರಿತು ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಫೆ.29 ಮತ್ತು ಮಾರ್ಚ್ 01ರಂದು ಚಿತ್ರದುರ್ಗ ತಾಲ್ಲೂಕಿನ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ಮತ್ತು ತುಂತುರ ನೀರಾವರಿ ಘಟಕಗಳ ಅಳವಡಿಕೆ, ಅವುಗಳ ಉಪಯೋಗ ಮತ್ತು ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 10.30ಕ್ಕೆ ತರಬೇತಿ ಕಾರ್ಯಕ್ರಮ ಪ್ರಾರಂಭವಾಗಲಿದ್ದು, ಕಾರ್ಯಕ್ರಮದಲ್ಲಿ ಜೈನ್ ಇರೀಗೇಷನ್‌ನ ಬೇಸಾಯ ತಜ್ಞ ದೇವರಾಜ್ ಅವರು, ನೀರಿನ ಸಮರ್ಥ ಬಳಕೆ, ಹನಿ ನೀರಾವರಿ ಮತ್ತು ಸ್ಪ್ರಿಂಕ್ಲರ್ ಘಟಕಗಳ ಅಳವಡಿಕೆ, ಉಪಯೋಗ ಮತ್ತು ಅವುಗಳ ನಿರ್ವಹಣೆಯ ಕುರಿತು ವಿಷಯ ಮಂಡನೆ ಮತ್ತು ಪ್ರಾತ್ಯಕ್ಷಿಕೆ ನೀಡುವರು. ಲೇಖಕರು ಹಾಗೂ ಕೃಷಿ ತಜ್ಞ ಅವಿನಾಶ್ ಟಿಜಿಎಸ್ ಅವರು ರಸಾಯನಿಕ ಮುಕ್ತ ಕೃಷಿ ಮತ್ತು ಬೆಳಕಿನ ಬೇಸಾಯ ಕುರಿತು ವಿಷಯ ಮಂಡನೆ ಮಾಡುವರು. ಫೆ.29ರಂದು ಚಿತ್ರದುರ್ಗ ತಾಲ್ಲೂಕಿನಭರಮಸಾಗರಮತ್ತುಹಿರೇಗುಂಟನೂರು ಹೋಬಳಿಯ 60 ಜನ ಆಸಕ್ತ ರೈತರು ಮತ್ತು ಮಾರ್ಚ್ 01ರಂದು ಚಿತ್ರದುರ್ಗ ತಾಲ್ಲೂಕಿನ ಕಸಬಾ ಮತ್ತು ತುರುವನೂರು ಹೋಬಳಿಯ 60 ಜನ ರೈತರು ಭಾಗವಹಿಸಬಹುದಾಗಿದೆ.

ತರಬೇತಿಯಲ್ಲಿ ಭಾಗವಹಿಸಲು ರಜನೀಕಾಂತ. ಆರ್, ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿಕೇಂದ್ರ, ಬಬ್ಬೂರು ಫಾರಂ (8277931058), ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931058) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 60 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು.

# ವಿಜ್ಞಾನದ ಹಾದಿಯಲ್ಲಿ ನಾವುಗಳು ಸಾಗೋಣ

» ಚಿತ್ರದುರ್ಗ




ಮೂಢ ನಂಬಿಕೆಯನ್ನು ಕಳಚಿ, ಮಾಟ, ಮಂತ್ರವನ್ನು ನಂಬದೆ ವಿಜ್ಞಾನವನ್ನು ನಂಬುವುದರ ಮೂಲಕ ನಮ್ಮ ಬದುಕನ್ನು ಸರಿದಾರಿಗೆ ತೆಗೆದುಕೊಂಡು ಹೋಗಬೇಕಿದೆ ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನ ಪರಿಷತ್‌ನ ಜಿಲ್ಲಾಧ್ಯಕ್ಷ ನಾಗರಾಜ್ ಸಂಗಂ ಕರೆ ನೀಡಿದರು.

ನಗರದ ಕರುವಿನ ಕಟ್ಟೆಯಲ್ಲಿನ ಶ್ರೀ ಸದ್ಗುರು ಕಬೀರಾನಂದಾಶ್ರಮದ ಆವರಣದಲ್ಲಿ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಫ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸರ್ಕಾರವೂ ಸಹಾ ಫೆ. 28ನ್ನು ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಎಲ್ಲಾ ಶಾಲೆಗಳಲ್ಲಿ ಆಚರಣೆಯನ್ನು ಮಾಡುವಂತೆ ಸುತ್ತೋಲೆಯನ್ನು ಹೊರಡಿಸಿದ್ದು ಇದ್ದಲ್ಲದೆ ಪ್ರತಿಜ್ಞಾ ವಿಧಿಯನ್ನು ಸಹಾ ನೀಡಿದೆ. ಇದನ್ನು ಎಲ್ಲರು ಪಾಲಿಸುವುದರ ಮೂಲಕ ವಿಜ್ಞಾನ ದಿನಾಚರಣೆಯನ್ನು ಆಚರಣೆ ಮಾಡಬೇಕಿದೆ ಎಂದರು.

ಇಂದಿನ ದಿನಮಾನದಲ್ಲಿ ಹಲವಾರು ಜನತೆಯನ್ನು ಕೆಲವರನ್ನು ಮೂಢನಂಬಿಕೆಗೆ ಒಳಪಡಿಸುವುದರ ಮೂಲಕ ದಾರಿ ತಪ್ಪಿಸುತ್ತಿದ್ದಾರೆ, ಇದರ ವಿರುದ್ದ ಹೋರಾಟವನ್ನು ಮಾಡಬೇಕಿದೆ ಯಾವುದೇ ಸಮಯದಲ್ಲಿಯೂ ಸಹಾ ಮಾಟ, ಮಂತ್ರಕ್ಕೆ ಒಳಗಾಗಬಾರದು ಏನಾದರೂ ಕಾಯಿಲೆ ಬಂದರೆ ಚಿಕಿತ್ಸೆಯನ್ನು ಪಡೆಯುವುದರ ಮೂಲಕ ಔಷಧಿಯನ್ನು ಪಡೆಯಬೇಕಿದೆ ಇದನ್ನು ಬಿಟ್ಟು ಬೇರೆ ಮಾಡಬಾರದು, ನಮ್ಮಲ್ಲಿನ ಮೂಢ ನಂಬಿಕೆಯನ್ನು ಬಿಟ್ಟು ವಿಜ್ಞಾನ ಕಡೆ ಬರಬೇಕಿದೆ, ನಮ್ಮ ಜೀವನದಲ್ಲಿ ವಿಜ್ಞಾನ ಹಾಸು ಹೊಕ್ಕಾಗಿದೆ. ಇದನ್ನು ಸರಿಯಾದ ರೀತಿಯಲ್ಲಿ ಬಳಕೆ ಮಾಡಿಕೊಳ್ಳಬೇಕಿದೆ ಎಂದು ಸಂಗಂ ಕರೆ ನೀಡಿದರು.

ಕೆ.ಎಸ್.ಎಸ್.ಆರ್.ಸಿ. ಜಿಲ್ಲಾ ಘಟಕದ ಕಾರ್ಯದರ್ಶಿ ಪಿ.ಲೋಕೇಶ್ ಮಾತನಾಡಿ, ಸರ್.ಸಿ.ವಿ.ರಾಮನ್ ರವರು ಮಾಡಿದ ಸಂಶೋಧನೆಯನ್ನು ಹೂರ ಜಗತ್ತಿಗೆ ನೀಡಿದ ದಿನವನ್ನು ಸರ್ಕಾರ ವಿಜ್ಞಾನ ದಿನವನ್ನಾಗಿ ಆಚರಣೆಯನ್ನು ಮಾಡುತ್ತಿದೆ. ವಿಜ್ಞಾನಕ್ಕೆ ಎಲ್ಲರು ಪ್ರೋತ್ಸಾಹವನ್ನು ನೀಡಬೇಕಿದೆ, ಇದನ್ನು ಬಳಕೆ ಮಾಡುವುದರ ಮೂಲಕ ನಮ್ಮ ಜೀವನವನ್ನು ಸರಿಪಡಿಸಿಕೊಳ್ಳಬೇಕಿದೆ. ವಿಜ್ಞಾನದಿಂದನಮ್ಮಜೀವನದಲ್ಲಿಹಲವಾರು ರೀತಿಯ ಉಪಯೋಗಗಳಿವೆ. ಕಲಿಕೆಯಲ್ಲಿ ವಿಜ್ಞಾನವನ್ನು ಬಳಕೆ ಮಾಡಿಕೊಳ್ಳಿ, ಪಿಯುನಲ್ಲಿ ನಿಮ್ಮ ನೆಚ್ಚಿನ ವಿಷಯವಾಗಿ ವಿಜ್ಞಾನವನ್ನು ಆಯ್ಕೆ ಮಾಡಿಕೊಳ್ಳುವಂತೆ ಮಕ್ಕಳಿಗೆ ತಿಳಿ ಹೇಳಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್‌ನ ಕಾರ್ಯದರ್ಶಿ ಹುರಳಿ ಎಂ. ಮಾತನಾಡಿ, ವಿಜ್ಞಾನ ದಿನಾಚರಣೆಯ ರೂವಾರಿ ಸರ್ ಸಿ.ವಿ.ರಾಮನ್ ರವರು ಅವರು ಕಂಡು ಹಿಡಿದ ಸಂಶೋಧನೆಯನ್ನು ಹೊರ ಪ್ರಪಂಚಕ್ಕೆ ತಿಳಿಸಿದ ದಿನ ಇದಾಗಿದ್ದರಿಂದ ಈ ದಿನವನ್ನು ವಿಜ್ಞಾನ ದಿನವನ್ನಾಗಿ ಆಚರಣೆ ಮಾಡಲಾಗುತ್ತಿದೆ. ರಾಮನ್ ರವರು ನೋಬಲ್ ಪ್ರಶಸ್ತಿಯನ್ನು ಪಡೆಯುವುದರ ಮೂಲಕ ದೇಶಕ್ಕೆ ಕೂಡುಗೆಯನ್ನು ನೀಡಿದ್ದಾರೆ ಎಂದರು.

ಇಂದು ನಾವು ಉಪಯೋಗ ಮಾಡುವ ಮೊಬೈಲ್, ಟಿ.ವಿ. ಲಾಪ್ ಟ್ಯಾಪ್ ಸೇರಿದಂತೆ ಹಲವಾರು ವಸ್ತುಗಳು ವಿಜ್ಞಾನದ ಕೂಡುಗೆಗಳಾಗಿವೆ. ಮಾನವ ಇಂದು ಚಂದ್ರಯಾನ ಮಾಡಿದ್ದಾನೆ ಎಂದರೆ ಅದು ಸಹಾ ವಿಜ್ಞಾನದ ಕೂಡುಗೆಯಾಗಿದೆ. ದೇಶವೂ ಸಹಾ ವಿಜ್ಞಾನಕ್ಕೆ ಹೆಚ್ಚಿನ ಒತ್ತನ್ನು ನೀಡುತ್ತಿದೆ, ವಿಜ್ಞಾನಿಗಳ ಸಂಶೋಧನೆಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡುವುದರ ಮೂಲಕ ಅವರಿಗೆ ಪ್ರೋತ್ಸಾಹ ಮಾಡುತ್ತಿದೆ. ನೀವು ಸಹಾ ಮುಂದೆ ವಿಜ್ಞಾನದ ವಿದ್ಯಾರ್ಥಿಗಳಾಗಿ ದೇಶಕ್ಕೆ ನಿಮ್ಮದೇ ಆದ ಕೂಡುಗೆಯನ್ನು ನೀಡಿ ಎಂದು ತಿಳಿಸಿದರು. ಕೆ.ಎಸ್.ಎಸ್. ಆರ್.ಸಿ. ಜಿಲ್ಲಾ ಘಟಕದ ಉಪಾಧ್ಯಕ್ಷರಾದ ಜೆ.ಬಿ.ಕಿರಣ ಶಂಕರ್, ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಆರ್.ಶೈಲಜಾ ಬಾಬು, ಸಂಘಟನಾ ಕಾರ್ಯದರ್ಶಿ ಎಂ.ರಂಗಪ್ಪ, ಪದಾಧಿಕಾರಿಗಳಾದ ಕೆಂಚಪ್ಪ ಭಾಗವಹಿಸಿದ್ದರು, ಅಧ್ಯಕ್ಷತೆಯನ್ನು ಶ್ರೀ ಸದ್ಗುರು ಕಬೀರಾನಂದಸ್ವಾಮಿ ಫ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಹೆಚ್.ಟಿ.ಬಸವರಾಜು ವಹಿಸಿದ್ದರು. ಶ್ರೀ ಸದ್ಗುರು ಕಬೀರಾನಂದಸ್ವಾಮಿ ಫ್ರೌಢಶಾಲೆಯ ಮಕ್ಕಳು ಪ್ರಾರ್ಥಿಸಿದರೆ, ಲಕ್ಷ್ಮೀ ಸ್ವಾಗತಿಸಿದರು.

# ಪಾಕಿಸ್ತಾನ ಜಿಂದಾಬಾದ್: ಎಬಿವಿಪಿ ಪ್ರತಿಭಟನೆ

» ಚಿತ್ರದುರ್ಗ

ಪ್ರಜಾಪ್ರಭುತ್ವದ ದೇಗುಲವಾದ ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂಬ ಘೋಷಣೆ ಕೂಗಿರುವ ಘಟನೆ ಖಂಡಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಪ್ರತಿಭಟನೆಯನ್ನು ನಡೆಸಿ ಜಿಲ್ಲಾಡಳಿತ ಮೂಲಕ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲಾಯಿತು.



ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸಯ್ಯದ್ ನಾಸೀರ್ ಹುಸೇನ್ ಅವರ ಗೆಲುವಿನ ಸಂದರ್ಭದಲ್ಲಿ ಅವರ ಬೆಂಬಲಿಗರು ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿರುವುದು ಖಂಡನೀಯ, ಕೂಡಲೇ ಸರ್ಕಾರ ತಪ್ಪಿಸ್ಥರನ್ನು ಬಂಧಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗುವ ಸಂದರ್ಭದಲ್ಲಿ ಅವರ ಪಕ್ಕದಲ್ಲಿ ಇರುವ ವ್ಯಕ್ತಿಗಳು ಸಹಿತ ತಡೆಯುವುದಕ್ಕೆ ಪ್ರಯತ್ನ ಮಾಡಲಿಲ್ಲ ಹಾಗೂ ಅಲ್ಲೇ ಇದ್ದ ನಾಸೀರ್ ಹುಸೇನ ಸಹಿತ ಇದಕ್ಕೆ ವಿರೋಧ ವ್ಯಕ್ತಪಡಿಸಲಿಲ್ಲ, ಪಾಕ್ ಪರ ಘೋಷಣೆ ಕುರಿತು ಪತ್ರಕರ್ತರು ಪ್ರತಿಕ್ರಿಯೆ ಕೇಳಿದಾಗ ನಾಸೀರ್ ಹುಸೇನ್ ನಿರಾಕರಿಸಿ, ಪ್ರಶ್ನೆ ಮಾಡಿದ ಮಾಧ್ಯಮ ಸಿಬ್ಬಂದಿ ಮೇಲೆಯೇ ದರ್ಪ ತೋರಿರುವುದು ನೋಡಿದರೆ ದೇಶದ್ರೋಹಿಗಳಿಗೆ ಬೆಂಬಲ ನೀಡಲು ಹೊರಟಿದ್ದಾರಾ ಎಂಬ ಪ್ರಶ್ನೆ ಮೂಡುತ್ತದೆ ಎಂದಿದ್ದಾರೆ.

ಕೆಲವು ದಿನಗಳ ಹಿಂದೆ ವಿಧಾನಸಭೆ ಚುನಾವಣೆ ಗೆಲುವಿನ ಸಂದರ್ಭದಲ್ಲೂ ಬೆಳಗಾವಿಯಲ್ಲಿ ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿ ಪಾಕಿಸ್ತಾನದ ಧ್ವಜ ಹಾರಿಸಿದ್ದರು. ದೇಶದ್ರೋಹಿಗಳಿಗೆ ವಿಧಾನಸಭೆಯಲ್ಲಿ ಜಾಗ ಕೊಟ್ಟಿರುವುದು ಆತಂಕಕಾರಿ ಬೆಳವಣಿಗೆ, ಈ ವಿಷಯ ಅತ್ಯಂತ ಗಂಭೀರವಾಗಿದ್ದರೂ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದೆ ಇರುವುದಕ್ಕೆ ಪದೇ ಪದೇ ಇಂತಹ ಘಟನೆಗಳು ನಡೆಯುತ್ತವೆ ಸರಕಾರ ಕೂಡಲೇ ಕಠಿಣ ಕ್ರಮ ಕೈಗೊಳ್ಳಬೇಕೆಂದು ಎಬಿವಿಪಿ ಒತ್ತಾಯಿಸುತ್ತದೆ.

ಪಾಕಿಸ್ತಾನ ಪರ ಘೋಷಣೆ ಕೂಗಿದ ವ್ಯಕ್ತಿಯ ಮೇಲೆ ದೇಶದ್ರೋಹದ ಅಪರಾಧದ ಅಡಿಯಲ್ಲಿ ಪ್ರಕರಣ ದಾಖಲಿಸಬೇಕು ಮತ್ತು ಈ ಪ್ರಕರಣದ ಸೂಕ್ತ ತನಿಖೆ ನಡೆದು ತೀರ್ಪು ಪ್ರಕಟವಾಗುವ ತನಕ ರಾಜ್ಯ ಸಭೆಯ ಸದಸ್ಯರಾಗಿ ಪ್ರಮಾಣ ವಚನವನ್ನು ನೀಡಬಾರದು ಎಂದು ಅಗ್ರಹಿಸುತ್ತೇವೆ. ಸರ್ಕಾರ ಕೂಡಲೇ ತಪ್ಪಿತಸ್ಥ ರನ್ನು ಬಂಧಿಸಿ ಜೈಲಿಗೆ ಕಳುಹಿಸಬೇಕು. ಇಲ್ಲವಾದರೆ ರಾಜ್ಯಾದ್ಯಂತ ತೀವ್ರ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ನಗರ ಕಾರ್ಯದರ್ಶಿ ಗೋಪಿ.ಆರ್, ರಾಜ್ಯ ಕಾರ್ಯಕಾರಿಣಿ ಸದಸ್ಯ ಸುದರ್ಶನ್ ನಾಯ್ಕ, ಮಹಿಳಾ ಪ್ರಮುಖ್ ಲಕ್ಷ್ಮೀ, ಮಹಿಳಾ ಸಹ ಪ್ರಮುಖ್ ಚಂದನ್.ಎಸ್, ಚಿತ್ರಸ್ವಾಮಿ–ಜಾಲತಾಣ, ಕಾರ್ಯಕರ್ತರಾದ ದರ್ಶನ್, ಸುಮನ್, ಯುವರಾಜ್, ತಿಪ್ಪೇಶ್, ಸುದೀಪ್ ಇನ್ನು ಇತರರು ಹಾಜರಿದ್ದರು.

### ಪಾಕಿಸ್ತಾನ ಜಿಂದಾಬಾದ್: ಯುವ ಸೇನೆ ಖಂಡನೆ

» ಚಿತ್ರದುರ್ಗ

ವಿಧಾನಸೌಧದಲ್ಲೇ ರಾಜ್ಯಸಭೆ ಚುನಾವಣಾ ಫಲಿತಾಂಶದ ಸಂಭ್ರಮಾಚಾರಣೆ ವೇಳೆ ಕಿಡಿಗೇಡಿಯೊಬ್ಬ ಪಾಕಿಸ್ತಾನ್ ಜಿಂದಾಬಾದ್ ಎಂದು ಕೂಗಿರುವುದು ಹಿಂದೂ ಯುವ ಸೇನೆ ಜಿಲ್ಲಾಧ್ಯಕ್ಷ ಎನ್.ಇ. ನಾಗರಾಜು ತೀವ್ರವಾಗಿ ಖಂಡಿಸಿದ್ದಾರೆ. ಪಾಕಿಸ್ತಾನ ಜಿಂದಾಬಾದ್ ಎಂಬ ರಾಷ್ಟ್ರ ವಿದ್ರೋಹದ ಉಗ್ರ ಘೋಷಣೆ ವಿಧಾನಸೌಧದಲ್ಲಿ ಕೂಗಿರುವ ನೀಚರನ್ನು ಉಗ್ರಶಿಕ್ಷೆಗೆ ಗುರಿಪಡಿಸಬೇಕು. ಇಂತಹ ಪ್ರಕರಣಗಳು ಮತ್ತೆ ಮರುಕಳಿಸದಂತೆ ಎಚ್ಚರ ವಹಿಸಬೇಕು ಎಂದು ಹಿಂದೂ ಯುವ ಸೇನೆ ಜಿಲ್ಲಾಧ್ಯಕ್ಷ ಎನ್.ಇ. ನಾಗರಾಜು ತೀವ್ರವಾಗಿ ಖಂಡಿಸಿದ್ದಾರೆ.

### ಸರ್ಕಾರಿ ಆಸ್ತಿ ಕಾವಲಿಗೆ ಲ್ಯಾಂಡ್ ಬೀಟ್ ತಂತ್ರಾಂಶ ಬಳಕೆ



» ದಾವಣಗೆರೆ

ಸರ್ಕಾರಿ ಆಸ್ತಿಗಳೆಂದರೆ ಯಾರು ಬೇಕಾದರೂ ಒತ್ತುವರಿ ಮಾಡಬಹುದು ಮತ್ತು ಯಾರು ಕೇಳುವವರಿಲ್ಲ ಎಂಬ ಭಾವನೆ ಇತ್ತು. ಆದರೆ ಸರ್ಕಾರಿ ಆಸ್ತಿಗಳ ಕಾವಲಿಗೆ ಲ್ಯಾಂಡ್ ಬೀಟ್ ವ್ಯವಸ್ಥೆ ಜಾರಿಗೆ ಬಂದಿದ್ದು ಮುಂದಿನ ದಿನಗಳಲ್ಲಿ ಸರ್ಕಾರಿ ಆಸ್ತಿಗಳ ಒತ್ತುವರಿಗೆ ಅವಕಾಶ ಇಲ್ಲ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ದಾವಣಗೆರೆ ಕಸಬಾ ಹೋಬಳಿಯ ದೊಡ್ಡಬಾತಿ ಗ್ರಾಮಕ್ಕೆ ಬುಧವಾರ ಭೇಟಿ ನೀಡಿ ಅಲ್ಲಿನ ಸರ್ವೆ ನಂಬರ್ 34 ರಲ್ಲಿನ ಸರ್ಕಾರಿ ಸ್ಮಶಾನದ ಜಮೀನನ್ನು ಸ್ವತಃ ಆಪ್ ಮೂಲಕ ಸರ್ವೆ ಮಾಡಿ ಒತ್ತುವರಿ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಜಿಯೋ ಫೆನ್ಸಿಂಗ್ ಮಾಡಿರುತ್ತಾರೆ.ಸರ್ಕಾರಿ ಆಸ್ತಿಗಳ ಸಂರಕ್ಷಣೆ ಮಾಡಲು ಸರ್ಕಾರ ಹೊಸ ತಂತ್ರಾಂಶವನ್ನು ಅಭಿವೃದ್ದಿಪಡಿಸಿದೆ. ಈ ತಂತ್ರಾಂಶದ ಮೂಲಕ ಗ್ರಾಮ ಆಡಳಿತಾಧಿಕಾರಿಗಳು ಸರ್ಕಾರದ ಎಲ್ಲಾ ಜಮೀನುಗಳಿಗೆ ಜಿಯೋಫೆನ್ಸಿಂಗ್ ಮಾಡುತ್ತಾರೆ. ಈ ಆಪ್ ಮೂಲಕ ಜಿಯೋ ಫೆನ್ಸಿಂಗ್ ಮಾಡಿ, ಒತ್ತುವರಿ ಮಾಡಿದ್ದಲ್ಲಿ ಅಂತಹ ಆಸ್ತಿಗಳ ವಿವರ ಲಬ್ಯವಾಗುತ್ತದೆ. ಈ ಸ್ಥಳಗಳಿಗೆ ನಿಗದಿತ ಅವಧಿಯಲ್ಲಿ ಭೇಟಿ ನೀಡಲು ಯಾವ ರೀತಿ ಪೊಲೀಸ್ ಬೀಟಿಂಗ್ ವ್ಯವಸ್ಥೆ ಇರುತ್ತದೆ, ಅದೇ ರೀತಿ ಸರ್ಕಾರಿ ಆಸ್ತಿಗಳ ಸಂರಕ್ಷಣೆ ಮಾಡಲು ಬೀಟಿಂಗ್ ವ್ಯವಸ್ಥೆಯನ್ನು ಆಪ್‌ನಲ್ಲಿ ಕಲ್ಪಿಸಲಾಗಿದೆ.ಈ ಆಪ್ ಮೂಲಕ ಪ್ರಾಯೋಗಿಕ ಸರ್ವೆಯನ್ನು ದೊಡ್ಡಬಾತಿಯಲ್ಲಿ ಜಿಲ್ಲಾಧಿಕಾರಿಯವರು ಖುದ್ದು ಕೈಗೊಂಡು ಸರ್ವೆ ನಂಬರ್ 34 ರಲ್ಲಿ ಸರ್ಕಾರಿ ಸ್ಮಶಾನ ಭೂಮಿ ಒತ್ತುವರಿಯಾಗಿದೆಯೋ ಇಲ್ಲವೋ ಎಂಬ ಮಾಹಿತಿಯನ್ನು ಖಚಿತಪಡಿಸಿಕೊಂಡರು. ಈ ಭೂಮಿಯು ಒತ್ತುವರಿಯಾಗಿರುವುದಿಲ್ಲ ಎಂಬುದು ಇದರಿಂದ ಮಾಹಿತಿ ಲಬ್ಯವಾಯಿತು. ಆಪ್ ಮೂಲಕ ಎಲ್ಲಾ ಸರ್ಕಾರಿ ಜಮೀನು, ಜಾಗಗಳನ್ನು ಸರ್ವೆ ಮಾಡಿ ಜಿಯೋ ಫೆನ್ಸಿಂಗ್ ಮಾಡುವ ಮೂಲಕ ದತ್ತಾಂಶ ಸಂಗ್ರಹಕ್ಕೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳೊಂದಿಗೆ ತಹಶೀಲ್ದಾರ್ ಡಾ; ಅಶ್ವಥ್ ಹಾಗೂ ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು ಉಪಸ್ಥಿತರಿದ್ದರು.

### ಮಹಿಳಾ ಜಿಲ್ಲಾಧ್ಯಕ್ಷರಾಗಿ ಸಹನಾ ಆಯ್ಕೆ

ದಾವಣಗೆರೆ: ಕರ್ನಾಟಕ ಸಮರ ಸೇನೆಗೆ ಮಹಿಳಾ ಜಿಲ್ಲಾಧ್ಯಕ್ಷರಾಗಿ ಸಹನಾ ಕೆ.ನಾಯ್ಕ ಅವರನ್ನು ಆಯ್ಕೆ ಮಾಡಲಾಯಿತು. ಸಂಘದ ಕಚೇರಿಯಲ್ಲಿ ರಾಜ್ಯ ಮಹಿಳಾ ಉಪಾಧ್ಯಕ್ಷೆ ವೈ ಭಾಗ್ಯದೇವಿ ಅವರು ಸಹನಾ ನಾಯ್ಕ ಅವರಿಗೆ ಶಾಲು ಹೊದಿಸುವ ಮೂಲಕ ಆದೇಶ ಪತ್ರ ನೀಡಲಾಯಿತು.ನಾಡು ನುಡಿ, ಸಂಸ್ಕೃತಿ, ಭಾಷೆ, ಜಲಕ್ಕೆ ದಕ್ಕೆಯಾಗದಂತೆ ಕರ್ನಾಟಕ ಸಮರ ಸೇನೆ ವತಿಯಿಂದ ಸಂಘಟಿತರಾಗಿ ಹೋರಾಡಲು ಬದ್ಧರಾಗಿಬೇಕು ಎಂದು ಸಂಘದ ರಾಜ್ಯ ಕಾರ್ಯಾಧ್ಯಕ್ಷ ಡಾ.ಬಿ.ವಾಸುದೇವ ತಿಳಿಸಿದರು.ಈ ವೇಳೆ ರಾಜ್ಯ ಉಪಾಧ್ಯಕ್ಷ ಜಿ.ಪಿ. ಪ್ರಕಾಶ್ ದೀಪಾ, ಸೋನು ಸೇರಿದಂತೆ ಇತರರು ಇದ್ದರು.




## ಪ್ರಮುಖ ಸುದ್ದಿ

# ವಿವಿಎಸ್‌ನಿಂದ ಡಿಆರ್‌ಡಿಓಗೆ ಬಿಡುವ ನೀರನ್ನು ನಿಲ್ಲಿಸಿ

» ಚಿತ್ರದುರ್ಗ

ವಿ ವಿ ಸಾಗರದಿಂದ ಡಿಆರ್‌ಡಿಓಗೆ ಬಿಡುವ ನೀರನ್ನು ಸ್ಥಗಿತಗೊಳಿಸುವಂತೆ ರಾಜ್ಯ ರೈತ ಸಂಘ ಸರ್ಕಾರವನ್ನು ಆಗ್ರಹಿಸಿದೆ.

ಚಿತ್ರದುರ್ಗ ಎಂ.ಪಿ. ಕಛೇರಿಯ ಮುಂದೆ ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ಹಣವನ್ನು ನೀಡುವಂತೆ ಆಗ್ರಹಿಸಿ ಕಳೆದ 23 ದಿನಗಳಿಂದ ನಿರಂತರವಾಗಿ ರೈತರು ಧರಣಿ ನಡೆಸಲಾಗುತ್ತಿದೆ. ಕರ್ನಾಟಕದ ಹಿಂದಿನ ವಿಧಾನ ಸಭೆಯ ಚುನಾವಣೆ ಪ್ರಚಾರಕ್ಕೆ ಚಿತ್ರದುರ್ಗಕ್ಕೆ ಬಂದ ಪ್ರಧಾನ ಮಂತ್ರಿಗಳು ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ಹಣವನ್ನು ಕಾಯ್ದಿರಿಸಿದ್ದೇವೆ ಎಂದು ಹೇಳಿದ್ದು ಸರಿಯಷ್ಟೇ,

ಆದರೆ ಒಂದು ವರ್ಷ ಕೆಳದರೂ ಬಿಡುಗಡೆ ಮಾಡಿಲಿಲ್ಲ. ಇದೇ ಕಾರಣಕ್ಕೆ ಚಿತ್ರದುರ್ಗ ಎಂಪಿ ಕಛೇರಿಯ ಮುಂದೆ 23 ದಿನಗಳಿಂದ ನಿರಂತರವಾಗಿ ರೈತರು ಧರಣಿ ನಡೆಸುತ್ತಿದ್ದಾರೆ ಈ ಬಗ್ಗೆ ಎಂಪಿ ನಾರಾಯಣಸ್ವಾಮಿ ಯವರಿಂದ ಈ ಬಗ್ಗೆ ಯಾವುದೇ ಪ್ರತಿಕ್ರಿಯೆ ಸಕರಾತ್ಮಕವಾಗಿ ದೊರೆತಿರುವುದಿಲ್ಲ ಎಂದು ದೂರಿದ್ದಾರೆ.




ಈ ವರ್ಷ 50 ವರ್ಷಗಳಲ್ಲಿ ಅತ್ಯಂತ ಭೀಕರ ಬರವನ್ನು ನಮ್ಮ ಜಿಲ್ಲೆಯಲ್ಲೂ ಎದುರಿಸುತ್ತಿದೇವೆ ಕೃಷಿ ಭೂಮಿಯಲ್ಲಿ ಮಳೆಯಿಲ್ಲದೆ ಬೆಳೆ ಇಲ್ಲ ಮತ್ತು ಬೋರ್‌ವೆಲೆಗಳಲ್ಲಿ ನೀರು ಬತ್ತಿ ಹೋಗಿದೆ. ತೋಟಗಳೆಲ್ಲ ಒಣಗಲು ಪ್ರಾರಂಭಿಸಿವೆ. ಕುಡಿಯುವ ನೀರಿಗೂ ಆಹಾಕಾರ ಪಡುವಂತಾಗಿದೆ ಈ ಜಿಲ್ಲೆಯಲ್ಲಿ ಯಾವುದೇ ನೀರಿನ ಮೂಲಗಳು ಇಲ್ಲ, ಆದಾಗ್ಯೂ ತಾವುಗಳು ಭದ್ರಾ ಮೆಲ್ದಂಡೆ ಯೋಜನೆಗೆ ಸಹಕರಿಸಿ ನೀರಾವರಿ ಕಲ್ಪಿಸದೇ ಇರುವ ಕಾರಣ ಸುಮಾರು 30 ಸಾವಿರ ಎಕರೆಗಿಂತಲೂ ಹೆಚ್ಚು ಭೂಮಿಯಲ್ಲಿ ಬೆಳೆ ಬೆಳೆಯಬಹುದಾದ ನೀರನ್ನು ಡಿ.ಆರ್.ಡಿ.ಓಗೆ ಕೊಡುವುದನ್ನು ಪರಿಗಣಿಸಿ ಕೂಡಲೇ ಡಿ.ಆರ್.ಡಿ.ಓಗೆ ನೀರನ್ನು ತಡೆಹಿಡಿಯಬೇಕೆಂದು ಈ ಮೂಲಕ ಒತ್ತಾಯಿಸಲಾಯಿತು.

ಸರ್ಕಾರ ನೀರನ್ನು ನಿಲ್ಲಿಸದಿದ್ದಲ್ಲಿ ರೈತರೇ ಈ ನೀರನ್ನು ತಡೆಹಿಡಿಯಬೇಕೆಂದು ಮುಂದಾಗಲಿದ್ದಾರೆಂದು ಈ ಮೂಲಕ ಗಮನ ಸೆಳೆದಿದೆ. ಅಲ್ಲದೆ ಮುಂದೆ ಜರುಗಬಹುದಾದ ಯಾವುದೇ ಅನಾಹುತಗಳಿಗೆರೈತಸಂಘಟನೆಯಾಗಲೀ, ರೈತರಾಗಲೀ ಸಾರ್ವಜನಿಕರಾಗಲೀ ಜವಾಬ್ದಾರರಲ್ಲ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಈಚಘಟ್ಟ ಸಿದ್ದವೀರಪ್ಪ, ಡಿ ಸಿ ಹಳ್ಳಿ ಮಲ್ಲಿಕಾರ್ಜುನಪ್ಪ, ಹೆಚ್ ಡಿ ಪುರ ಮಲ್ಲಿಕಾರ್ಜುನ ಸತೀಶ್, ಬಸವರಾಜಪ್ಪ, ಜಯಣ್ಣ, ರಂಗಸ್ವಾಮಿ, ಚಂದ್ರಮೌಳಿ, ಇಂದೂದಾರ, ಲೋಕಣ್ಣ, ಮಹಾದೇವಪ್ಪ, ರಾಜಪ್ಪ, ವಿಶ್ವನಾಥಪ್ಪ, ಜಯಣ್ಣ, ಸದಾಶಿವಪ್ಪ, ನಾಗರಾಜ ಚಾರ್, ಹರಳಯ್ಯ, ಅಜ್ಜಪ್ಪ, ಚಂದ್ರಪ್ಪ, ನಾಗಪ್ಪ, ತುಳಜಮ್ಮ, ಇನ್ನೂ ಮುಂತದಾವರು ಭಾಗವಹಿಸಿದರು.

## ಫಾಸ್ಟ್ ನ್ಯೂಸ್

### ಮಾ.06ರಂದು ದಿಶಾ ಸಭೆ

» ಚಿತ್ರದುರ್ಗ

ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆ ಮಾರ್ಚ್ 06 ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಸಭೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ನವೆಂಬರ್-2023 ರಿಂದ ಜನವರಿ-2024 ರವರೆಗಿನ ಅವಧಿಯ ಪ್ರಗತಿ ಪರಿಶೀಲನೆ ನಡೆಯಲಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ತಿಳಿಸಿದ್ದಾರೆ.

### ಉದ್ಯಮಾಕಾಂಕ್ಷಿಗಳಿಗೆ 10 ದಿನಗಳ ಉದ್ಯಮಶೀಲತಾ ತರಬೇತಿ

» ಚಿತ್ರದುರ್ಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಇವರ ಪ್ರಾಯೋಜಕತ್ವದಲ್ಲಿ ಸಿಡಾಕ್ (ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಧಾರವಾಢ) ಸಂಸ್ಥೆಯಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಇಚ್ಚಿಸುವ ಜಿಲ್ಲೆಯ ಉದ್ಯಮಾಕಾಂಕ್ಷಿಗಳಿಗೆ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು 2024ರ ಮಾರ್ಚ್ ಎರಡನೇ ವಾರದಲ್ಲಿ ಚಿತ್ರದುರ್ಗದಲ್ಲಿ ಸಂಘಟಿಸಲು ಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಉದ್ಯಮಶೀಲರ ಗುಣಲಕ್ಷಣಗಳು, ಸಾಮಾನ್ಯ ವ್ಯಕ್ತಿಯಿಂದ ಉದ್ಯಮಶೀಲ ವ್ಯಕ್ತಿಯಾಗಿ ಪರಿವರ್ತನೆಯಾಗಲು ಸಾಧನಾ ಪ್ರೇರಣಾ ತರಬೇತಿ, ಉದ್ಯಮ ಸ್ಥಾಪಿಸಲು ಅನುಸರಿಸಬೇಕಾದ ಮಜಲುಗಳು, ಉದ್ಯಮಾವಕಾಶಗಳ ಮಾಹಿತಿ, ಉದ್ಯಮ ಆಯ್ಕೆಯ ವಿಧಾನ, ಹಣಕಾಸು ನಿರ್ವಹಣೆ, ಮಾರುಕಟ್ಟೆ ನಿರ್ವಹಣೆ, ಲೆಕ್ಕಪತ್ರ ನಿರ್ವಹಣೆ, ಸಣ್ಣ ಉದ್ಯಮ ನಿರ್ವಹಣೆ ಹಾಗೂ ಸರ್ಕಾರದ ಸ್ವಯಂ ಉದ್ಯೋಗ ಯೋಜನೆಗಳ ಬಗ್ಗೆ ಪರಿಣಿತ ಅತಿಥಿ ಬೋಧಕರಿಂದ ಉಪನ್ಯಾಸವನ್ನು ಏರ್ಪಡಿಸಿ, ಶಿಬಿರಾರ್ಥಿಗಳು ಉದ್ಯಮ ಪ್ರಾರಂಭಿಸಲು ಬೆಂಬಲಸೇವೆ ಒದಗಿಸಲಾಗುವುದು. ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಲು 18 ರಿಂದ 55 ವರ್ಷ ವಯೋಮಿತಿಯೊಳಗಿರಬೇಕು. 10ನೇ ತರಗತಿ ಪಾಸಾದ ಉದ್ಯಮಾಕಾಂಕ್ಷಿಗಳು ಜಂಟಿ ನಿರ್ದೇಶಕರು, ಸಿಡಾಕ್ ರವರ ಕಚೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಜೋಗಿಮಟ್ಟಿ ರಸ್ತೆ, ಚಿತ್ರದುರ್ಗ ಅವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಲು ಕೋರಲಾಗಿದೆ. ಮಾಹಿತಿಗಾಗಿ ತರಬೇತುದಾರ ಪಿ.ವಿಜಯ್ ಕುಮಾರ್ ಅವರ ದೂರವಾಣಿ ಸಂಖ್ಯೆ 7760270058 ಗೆ ಸಂಪರ್ಕಿಸಬಹದು. ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ್‌ನ ಪ್ರತಿಯೊಂದಿಗೆ ಸಂಪರ್ಕಿಸಬಹುದಾಗಿದೆ. ತರಬೇತಿ ಕಾರ್ಯಕ್ರಮವು ಉಚಿತವಾಗಿದ್ದು, ತರಬೇತಿ ವೇಳೆಯಲ್ಲಿ ಊಟೋಪಚಾರ ಒದಗಿಸಲಾಗುವುದು. ಆಯ್ಕೆಯಾದ ಶಿಬಿರಾರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಪ್ರಯಾಣ ಮಾಡಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಾಗುತ್ತದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉದ್ಯೋಗಕ್ಕಾಗಿ ಅರ್ಜಿ

» ಚಿತ್ರದುರ್ಗ

ಬೆಂಗಳೂರು ಇಸ್ರೋ ಸಂಸ್ಥೆಯ ಯು.ಆರ್.ರಾವ್ ಸ್ಯಾಟ್‌ಲೈಟ್ ಅವರು ವಿವಿಧ ಹುದ್ದೆಗಳಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮಾರ್ಚ್ 1 ಅರ್ಜಿ ಸಲ್ಲಿಸಲು ಕೊನೆಯ ದಿನ. ಅರ್ಹ ಅಭ್ಯರ್ಥಿಗಳು ನಿಗಧಿ ದಿನಾಂಕದೊಳಗೆ ಅರ್ಜಿಯನ್ನು ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ www.isro.gov.in ಅಥವಾ www.ursc.gov.in ಅಥವಾ www.istrac.gov.in ಜಾಲತಾಣವನ್ನು ಸಂಪರ್ಕಿಸಬಹುದಾಗಿದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಉಚಿತ ಪರೀಕ್ಷಾ ಪೂರ್ವ ತರಬೇತಿ

» ಚಿತ್ರದುರ್ಗ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅರ್ಜಿ ಕರೆದಿರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ಅನುಕೂಲವಾಗುವ ನಿಟ್ಟಿನಲ್ಲಿ ಪಠ್ಯಕ್ರಮಕ್ಕೆ ಅನುಗುಣವಾಗಿ ಜಿಲ್ಲೆಯ ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಮಾರ್ಚ್ 2 ರಿಂದ 10 ರವರೆಗೆ ಉಚಿತ ಪರೀಕ್ಷಾ ಪೂರ್ವ ತರಬೇತಿಯನ್ನು ಜಿಲ್ಲಾ ಉದ್ಯೋಗ ವಿನಿಯಮ ಕಚೇರಿಯಲ್ಲಿ ಆಯೋಜಿಸಲಾಗಿದೆ. ತರಬೇತಿಗೆ ಹಾಜರಾಗಲಿಚ್ಚಿಸುವ ಅಭ್ಯರ್ಥಿಗಳು ನೇರವಾಗಿ ಚಿತ್ರದುರ್ಗ ನಗರದ ಹಳೇ ವೈಶಾಲಿ ಗೇಟ್ ಹತ್ತಿರದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಾರ್ಚ್ 2ರಂದು ಬೆಳಿಗ್ಗೆ 10ಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ತರಬೇತಿಗೆ ಹಾಜರಾಗಬೇಕು ಎಂದು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9945587060, 7022459064, 8105619020 ಗೆ ಸಂಪರ್ಕಿಸಬಹುದು ಎಂದು ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಕಿಶೋರ್ ಕುಮಾರ್ ತಿಳಿಸಿದ್ದಾರೆ.

# 7ನೇ ವೇತನ ಆಯೋಗದ ವರದಿ ಬಂದ ನಂತರ ಸಕಾರಾತ್ಮಕ ತೀರ್ಮಾನ: ಸಿಎಂ ಸಿದ್ದರಾಮಯ್ಯ

» ಬೆಂಗಳೂರು



ಪಂಚಗ್ಯಾರಂಟಿಗಳನ್ನು ಜಾರಿ ಮಾಡುವ ಆರ್ಥಿಕ ಹೊರೆಯ ನಡುವೆಯೂ 7ನೇ ವೇತನ ಆಯೋಗದ ಅಂತಿಮ ವರದಿ ಬಂದ ನಂತರ ಸರ್ಕಾರಿ ನೌಕರರ ಬಗ್ಗೆ ಸರ್ಕಾರ ಸಕಾರಾತ್ಮಕವಾಗಿ ತೀರ್ಮಾನವನ್ನು ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ರಾಜ್ಯ ಮಟ್ಟದ ಸರ್ಕಾರಿ ನೌಕರರ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದರು.

ಕೇಂದ್ರ ಸರ್ಕಾರ ನಿರ್ಧರಿಸಿದಂತೆ ತುಟ್ಟಿಭತ್ಯೆಯನ್ನು ಯಾವುದೇ ವಿಳಂಬವಿಲ್ಲದೇ ರಾಜ್ಯದಲ್ಲಿ ನೀಡಲಾಗುತ್ತಿದೆ. ಎನ್ ಪಿ ಎಸ್ ತೆಗೆದು ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿ ಮಾಡುವ ಬಗ್ಗೆಯೂ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು. ಸರ್ಕಾರಿ ನೌಕರರಿಗೆ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿ ಮಾಡುವ ಬಗ್ಗೆಯೂ ಶೀಘ್ರದಲ್ಲಿ ತೀರ್ಮಾನಿಸಲಾಗುವುದು ಎಂದ ಮುಖ್ಯಮಂತ್ರಿಗಳು ಸರ್ಕಾರ ಮತ್ತು ಜನರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಜವಾಬ್ದಾರಿಯುತ ಕೆಲಸವನ್ನು ಪರಿಣಾಮಕಾರಿಯಾಗಿ ಮಾಡುತ್ತಿರುವ ಸರ್ಕಾರಿ ನೌಕರರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

**ರಾಜ್ಯದ ಅಭಿವೃದ್ಧಿಯಲ್ಲಿ ಬಾಗಿಯಾಗಬೇಕು:** ಕರ್ನಾಟಕದಲ್ಲಿ 7.50 ಲಕ್ಷ ಸರ್ಕಾರಿ ನೌಕರರಿದ್ದಾರೆ. ಅದರಲ್ಲಿ 5.90 ಲಕ್ಷ ಜನ ಹಾಲಿ ಕೆಲಸ ಮಾಡುತ್ತಿದ್ದಾರೆ. 2.50 ಲಕ್ಷ ಜನರನ್ನು ಭರ್ತಿ ಮಾಡಲು ಸಾಧ್ಯವಾಗಿಲ್ಲ. ಕರ್ನಾಟಕದ ಜನಸಂಖ್ಯೆ 7 ಕೋಟಿ ಇದೆ. 7.50 ಲಕ್ಷ ಮಂಜೂರಾಗಿರುವ ಹುದ್ದೆಗಳಿವೆ. 7 ಲಕ್ಷ ಜನ 7 ಕೋಟಿ ಜನರ ಕಷ್ಟ ಸುಖಗಳಲ್ಲಿ ಭಾಗಿಯಾಗುವ, ರಾಜ್ಯದ ಅಭಿವೃದ್ಧಿಯಲ್ಲಿ ಬಾಗಿಯಾಗುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರು ನಮ್ಮನ್ನು 5 ವರ್ಷಕ್ಕೊಮ್ಮೆ ಆಯ್ಕೆ ಮಾಡಿದರೆ, ಸರ್ಕಾರಿ ಸೇವೆಗೆ ಸೇರಿದ ಮೇಲೆ ನಿವೃತ್ತಿಯಾಗುವವರೆಗೆ ನವೀಕರಣ ಮಾಡಿಸಿಕೊಳ್ಳುವ ಪ್ರಮೇಯವಿಲ್ಲ. ರಾಜಕಾರಣಿಗಳು 5 ವರ್ಷಕ್ಕೊಮ್ಮೆ ಕರ್ನಾಟಕದ ಜನರ ಆಶೀರ್ವಾದವನ್ನು ನವೀಕರಿಸಿಕೊಳ್ಳಬೇಕು ಎಂದರು.

**ಪ್ರಜಾಪ್ರಭುತ್ವದ ಮಾಲೀಕರ ಪರವಾಗಿ ಕೆಲಸ ಮಾಡಬೇಕು:** ರಾಜ್ಯದ ಜನ ನನಗೆ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗುವ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದಾರೆ. ಅದರಲ್ಲಿ ನೀವೂ, ನಿಮ್ಮ ಕುಟುಂಬದವರೂ ಇದ್ದಾರೆ. 7 ಕೋಟಿ ಕನ್ನಡಿಗರ ಭಾಗವಾದ ಸರ್ಕಾರಿ ನೌಕಕರು, ಸಾಮಾಜಿಕ ವ್ಯವಸ್ಥೆಯನ್ನು ಅರ್ಥ ಮಾಡಿಕೊಂಡಿದ್ದೀರಿ ಎಂದು ಭಾವಿಸಿದ್ದೇನೆ. ನಮ್ಮ ಸಮಾಜದಲ್ಲಿ ಸಾಮಾಜಿಕ, ಆರ್ಥಿಕ ಸಮಾನತೆ ತರಬೇಕು. ನಾವೆಲ್ಲರೂ ಪ್ರಜಾಪ್ರಭುತ್ವದ ಮಾಲೀಕರ ಪರವಾಗಿ ಕೆಲಸ ಮಾಡಲು ಇರಬೇಕು ಎಂದರು.

**ರಾಜ್ಯದ ಜನರ ಪರವಾಗಿ ಕೆಲಸ ಮಾಡಬೇಕಾಗಿರುವುದು ಮೊದಲನೇ ಆದ್ಯತೆ:** ಸರ್ಕಾರ ನಿಮಗೆ ನ್ಯಾಯ ಒದಗಿಸುವ ಕೆಲಸ ಮಾಡಬೇಕು ಎನ್ನುವುದರಲ್ಲಿ ಎರಡು ಮಾತಿಲ್ಲ. ಸರ್ಕಾರ ನಿಮ್ಮ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು. ಆದರೆ ಅದೇ ಮೊದಲ ಆದ್ಯತೆ ಅಲ್ಲ. ಅನ್ಯಾಯಗಳನ್ನು ಸರಿಪಡಿಸುವುದು ಸರ್ಕಾರದ ಕರ್ತವ್ಯ. ರಾಜ್ಯದ ಜನರ ಪರವಾಗಿ ಕೆಲಸ ಮಾಡಬೇಕಾಗಿರುವುದು ಮೊದಲನೇ ಆದ್ಯತೆ. ಬೇಡಿಕೆಗಳು ನಂತರದ ಆದ್ಯತೆ. ಇದನ್ನು ಸ್ಪಷ್ಟವಾಗಿ ನೀವು ಅರ್ಥಮಾಡಿಕೊಂಡಿದ್ದೀರಿ ಎನ್ನುವುದು ನನ್ನ ಅನಿಸಿಕೆ ಎಂದರು.

**ನಾನು ಸರ್ಕಾರಿ ನೌಕರರ ಪರ:** ಸರ್ಕಾರಿ ನೌಕರರ ಸಮಸ್ಯೆಗಳನ್ನು ಅರಿತು 7ನೇ ವೇತನ ಆಯೋಗ ರಚಿಸಲಾಗಿದ್ದು, 6ನೇ ವೇತನ ಆಯೋಗವನ್ನು ನಮ್ಮ ಸರ್ಕಾರ ಜಾರಿಗೆ ತಂದಿತ್ತು. ಆ ಸಂದರ್ಭದಲ್ಲಿ ಸರ್ಕಾರಿ ನೌಕರರ ವಿರುದ್ಧವಿರುವುದಾಗಿ ನನ್ನ ಮೇಲೆ ಅರೋಪ ಮಾಡಿದ್ದರು. ಆದರೆ ನಾನೇ 6ನೇ ವೇತನ ಆಯೋಗವನ್ನು ರಚಿಸಿದ್ದೆವು. ಸರ್ಕಾರಿ ನೌಕರರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವ ಕೆಲಸವಾಗಬೇಕು. 6ನೇ ವೇತನ ಆಯೋಗದಲ್ಲಿ ಶೇ. 30ರಷ್ಟು ಫಿಟ್‌ಮೆಂಟ್ ಸೌಲಭ್ಯ ನೀಡಲು 10,500 ಕೋಟಿ ರೂ.ಗಳನ್ನು ಹೆಚ್ಚುವರಿಯಾಗಿ ಬಿಡುಗಡೆ ಮಾಡಿದೆ. ಈಗ 7 ನೇ ವೇತನ ಆಯೋಗದ ಮಧ್ಯಂತರ ವರದಿಯಂತೆ 17% ಹೆಚ್ಚಳ ಮಾಡಲಾಗಿತ್ತು. ಆಯೋಗದ ಅಂತಿಮ ವರದಿ ನೀಡಲು ಇನ್ನಷ್ಟು ಕಾಲಾವಕಾಶ ಬೇಕೆಂದು ಆಯೋಗದ ಆಧ್ಯಕ್ಷರು ಕೋರಿದ್ದು, ಮಾರ್ಚ್ 15 ರವರೆಗೆ ವರದಿ ನೀಡಲು ಸಮಯಾವಕಾಶ ನೀಡಲಾಗಿದೆ. ಲೋಕಸಭಾ ಚುನಾವಣೆಯ ಹಿನ್ನಲೆ , ಆಯೋಗದ ಅಂತಿಮ ವರದಿಯನ್ನು ಆದಷ್ಟು ಜಾಗ್ರತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ. ನಾನು ಸರ್ಕಾರಿ ನೌಕರರ ಪರವಾಗಿದ್ದೇನೆ ಎಂದು ತಿಳಿಸಿದರು.

ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಕ್ಷರಿ, ಸಚಿವರಾದ ಈಶ್ವರ್ ಖಂಡ್ರೆ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಕೃಷ್ಣಪ್ಪ, ಶೇಷಯ್ಯ, ಭೈರಪ್ಪ, ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ಶೀನಿವಾಸ ತಿಮ್ಮೇಗೌಡ, ಖಜಾಂಚಿ ಡಾ: ಸಿದ್ದರಾಮಣ್ಣ, ರಾಜ್ಯ ಮಟ್ಟದ ನೌಕರರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಮಠದ ಸ್ವಾಮೀಜಿಗಳಾಗುವುದು ಕಷ್ಟವೇನಲ್ಲ, ಒಂದು ಮನೆಯ ಸೊಸೆಯಾಗುವುದು ತುಂಬಾ ಕಷ್ಟ: ಸ್ವಾಮೀಜಿ

» ಚಿತ್ರದುರ್ಗ



ಮಠದ ಸ್ವಾಮೀಜಿಗಳಾಗುವುದು ಕಷ್ಟವೇನಲ್ಲ. ಒಂದು ಮನೆಯ ಸೊಸೆಯಾಗುವುದು ತುಂಬಾ ಕಷ್ಟ. ಗಂಡನ ಮನೆಯಲ್ಲಿ ಎಲ್ಲರಿಗೂ ಹೊಂದಿಕೊಂಡು ಬಾಳುವುದು ಇನ್ನು ಕಠಿಣ ಎಂದು ಸಿರಿಗೆರೆಯ ತರಳಬಾಳು ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಕಳೆದ 2 ರಂದು ನಿಧನರಾದ ಸಿರಿಗೆರೆ ಪದವಿಪೂರ್ವ ಕಾಲೇಜಿನ ನಿವೃತ್ತ ಪ್ರಾಚಾರ್ಯರಾದ ರಾ.ವೆಂಕಟೇಶಶೆಟ್ಟಿರವರ ಪತ್ನಿ ಶ್ರೀಮತಿ ಸುಕನ್ಯಾರವರ ಆತ್ಮಶಾಂತಿಗಾಗಿ ವಾಸವಿ ಮಹಲ್ ರಸ್ತೆಯಲ್ಲಿರುವ ಕನ್ಯಕಾ ಮಹಲ್‌ನಲ್ಲಿ ಬುಧವಾರ ಏರ್ಪಡಿಸಲಾಗಿದ್ದ ವೈಕುಂಠ ಸಮಾರಾಧನೆಯಲ್ಲಿ ಆಶೀರ್ವಚನ ನೀಡಿ ಮಾತನಾಡಿದರು.


ತಂದೆ-ತಾಯಿಯನ್ನು ಬಿಟ್ಟು ಹೆಣ್ಣು ಗಂಡನ ಮನೆಯ ವಾತಾವರಣಕ್ಕೆ ಹೊಂದಿಕೊಳ್ಳುವುದು ಸುಲಭವಲ್ಲ. ಮನುಷ್ಯನ ಜೀವನದಲ್ಲಿ ಜನನ-ಮರಣ ಸಾಮಾನ್ಯ. ಹೃದಯದ ಭಾವನೆಗಳನ್ನು ದುಡ್ಡಿನಲ್ಲಿ ಅಳೆಯಬಾರದು. ಆರ್ಯವೈಶ್ಯ ಸಮಾಜದವರು ಯಾರಾದರೂ ಮೃತಪಟ್ಟಾಗ ಅಂತ್ಯಕ್ರಿಯೇಯಾಗುವತನಕ ಎಲ್ಲವನ್ನು ನಿಭಾಯಿಸಿ ಮಾನವೀಯತೆ ಮೆರೆಯುತ್ತಾರೆ. ಸಮುದ್ರದ ಅಡಿಯಲ್ಲಿ ಕಪ್ಪೆಚಿಪ್ಪು, ಮುತ್ತುರತ್ನಗಳು ಸಿಗುತ್ತವೆ. ಅಕ್ಕಮಹಾದೇವಿ, ವಾಸವಿ ಜೀವನದಲ್ಲಿ ಒಂದು ತರನಾದ ಕಷ್ಟಗಳು ಎದುರಾಗುತ್ತವೆ. ಇವರಿಬ್ಬರ ಜೀವನದಲ್ಲಿಯೂ ಆಧ್ಯಾತ್ಮಿಕ ಸೆಳೆತವಿತ್ತು. ಆರ್ಯವೈಶ್ಯ ಸಮಾಜದವರಿಗೆ ಮತ್ತೊಬ್ಬರ ಕಷ್ಟಕ್ಕೆ ಮರುಗುವ ಗುಣವಿದೆ ಎಂದು ಶ್ಲಾಘಿಸಿದರು. ಆರ್ಯವೈಶ್ಯ ಸಮಾಜಕ್ಕೂ ನಮ್ಮ ಮಠಕ್ಕೂ ಒಡನಾಟವಿದೆ. ಭಗವದ್ಗೀತೆಯನ್ನು ಸರಿಯಾಗಿ ಓದಿ ಅರ್ಥೈಸಿಕೊಳ್ಳದ ಮೂರ್ಖರು. ನಾನಾ ರೀತಿಯ ವ್ಯಾಖ್ಯಾನಗಳನ್ನು ಮಾಡುತ್ತಾರೆಂದರು. ಯಾವುದೇ ಕೆಲಸವನ್ನು ಮಾಡುವಾಗ ಫಲಾಪೇಕ್ಷೆಯನ್ನು ಬಯಸಬಾರದು. ರಾ.ವೆಂಕಟೇಶಶೆಟ್ಟಿಯವರು ತಮ್ಮ ಪತ್ನಿಯ ಸೇವೆಯನ್ನು ಪ್ರೀತಿಯಿಂದ ಮಾಡಿದ್ದಾರೆ. ಕರ್ತವ್ಯವೆಂದುಕೊಳ್ಳಲಿಲ್ಲ. ಎಲ್ಲರ ಜೀವನದಲ್ಲಿ ಬಾಲ್ಯ, ಯವೌನ, ಮುಪ್ಪು ಇದ್ದೆ ಇರುತ್ತದೆ. ಆತ್ಮಕ್ಕೂ ಶರೀರಕ್ಕೂ ಸಂಬಂಧವಿದೆ. ಮನುಷ್ಯನ ಜೀವನಕ್ಕೂ ಮರಗಿಡಗಳಿಗೂ ವ್ಯತ್ಯಾಸವಿದೆ. ಶ್ರೀಮತಿ ಸುಕನ್ಯಾ ವೆಂಕಟೇಶ್‌ರವರು ದೈಹಿಕವಾಗಿ ಅಗಲಿರಬಹುದು. ಆದರೆ ಮಾನಸಿಕವಾಗಿ ಅವರ ಪತಿ ಮತ್ತು ಕುಟುಂಬದವರ ಮನದಲ್ಲಿದ್ದಾರೆಂದು ಹೇಳಿದರು.

ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ಮಾತನಾಡಿ ಸನ್ಯಾಸ ಜೀವನಕ್ಕಿಂತ ದಾಂಪತ್ಯ ಜೀವನ ದೊಡ್ಡದು ಎಂದು ವೀರ ಸನ್ಯಾಸಿ ಸ್ವಾಮಿ ವಿವೇಕಾನಂದ ಹೇಳಿದ್ದಾರೆ. ಗಂಡನ ಆಗು-ಹೋಗುಗಳಿಗೆ ಹೆಂಡತಿ ಆಶ್ರಯ ಮುಖ್ಯ. 48 ವರ್ಷಗಳ ಕಾಲ ಸುಕನ್ಯಾರವರು ತಮ್ಮ ಪತಿ ರಾ.ವೆಂಕಟೇಶಶೆಟ್ಟಿರವರ ಜೊತೆ ಸಂಸಾರ ನಡೆಸಿದ್ದಾರೆ. ಭಗವಂತ ಅವರಿಗೆ ದುಃಖ ನುಂಗಿಕೊಳ್ಳುವ ಧೈರ್ಯ, ಸ್ಥೈರ್ಯ ಕೊಡಲಿ ಎಂದು ಪ್ರಾರ್ಥಿಸಿದರು.

ರಾ.ವೆಂಕಟೇಶಶೆಟ್ಟಿ ಮಾತನಾಡಿ ನನ್ನ ಪತ್ನಿ ಸುಕನ್ಯಾ 48 ವರ್ಷಗಳ ಕಾಲ ನನ್ನ ಜೊತೆ ಸಂಸಾರ ನಡೆಸಿ ಈಗ ಅಗಲಿರುವ ನೋವು ಸಹಿಸಿಕೊಳ್ಳಲು ಆಗುತ್ತಿಲ್ಲ. ಮರಕ್ಕೆ ಬೇರಿನಂತಿದ್ದರು. ಗಂಡ-ಹೆಂಡತಿ ನಡುವೆ ಪರಸ್ಪರ ಪ್ರೀತಿಯಿರುತ್ತದೆ. ಅನಾರೋಗ್ಯಕ್ಕೆ ತುತ್ತಾದಾಗ ಸ್ವಲ್ಪವೂ ಬೇಸರಪಟ್ಟುಕೊಳ್ಳದೆ ಪ್ರೀತಿಯಿಂದ ನನ್ನ ಹೆಂಡತಿಯ ಸೇವೆ ಮಾಡಿದ್ದೇನೆ. ಕರ್ತವ್ಯ ಅಂದುಕೊಳ್ಳಲಿಲ್ಲ. ಈಗಲೂ ನನ್ನ ಜೊತೆಯಲ್ಲಿಯೇ ಇದ್ದಾರೆಂದುಕೊಂಡಿದ್ದೇನೆ. ನನಗೂ ಮತ್ತು ನನ್ನ ಕುಟುಂಬಕ್ಕೂ ಸಿರಿಗೆರೆಯ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳ ಅನುಗ್ರಹವಿದೆ ಎಲ್ಲರನ್ನು ಕೈಹಿಡಿದು ಮೇಲಕ್ಕೆತ್ತಿದ್ದಾರೆ. ಈಗ ನನ್ನ ಕುಟುಂಬದ ಎಲ್ಲರೂ ಸುಖವಾಗಿದ್ದಾರೆಂದು ಭಾವುಕರಾದರು.

ಪರಿಶಿಷ್ಟ ಜಾತಿ, ಪ.ವರ್ಗದವರ ಕುಂದುಕೊರತೆ ಸಭೆ

# ಸಮಾಜದಲ್ಲಿ ಶಾಂತಿ, ಸೌಹಾರ್ದತೆ, ಸಹಬಾಳ್ವೆ ಅಗತ್ಯ; ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್




» ದಾವಣಗೆರೆ

ಸಮಾಜದಲ್ಲಿ ಎಲ್ಲಾ ಸಮುದಾಯದೊಂದಿಗೆ ಶಾಂತಿ, ಸೌಹಾರ್ದತೆಯೊಂದಿಗೆ ಸಹಬಾಳ್ವೆ ಮಾಡಿದಾಗ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗಲಿದೆ ಎಂದು ಜಿಲ್ಲಾ ರಕ್ಷಣಾಧಿಕಾರಿ ಉಮಾಪ್ರಶಾಂತ್ ತಿಳಿಸಿದರು.

ಅವರು ಬುಧವಾರ ನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ಪೊಲೀಸ್ ಇಲಾಖೆಗೆ ಸಂಬಂಧಿಸಿದ "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕುಂದು ಕೊರತೆ ನಿವಾರಣೆ ಕುರಿತು ಏರ್ಪಡಿಸಲಾದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಲ್ಲಾ ಸಮುದಾಯದವರು ಶಾಂತಿ ಸೌಹರ್ದತೆಯಿಂದ ಇರಬೇಕು ಎಂಬುದು ನಮ್ಮ ಭಾವನೆ. ನೀವು ಕೂಡ ಕಾನೂನಿನ ಬಗ್ಗೆ ತಿಳಿದುಕೊಂಡು ನಮ್ಮೊಂದಿಗೆ ನೀವು ಸಹಕರಿಸಬೇಕು. ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವುದರ ಜೊತೆಗೆ ದುಶ್ಚಟಗಳಿಂದ ದೂರ ಇದ್ದಾಗ ಮನೆ, ಮಕ್ಕಳ ಭವಿಷ್ಯ ಉಜ್ವಲವಾಗಲಿದೆ ಎಂದರು .

ನಮ್ಮ ಸಮಾಜ ಸಧೃಡ ಹಾಗೂ ವಿದ್ಯಾವಂತ ಸಮಾಜವಾಗಬೇಕು ಎಂಬುವುದು ನಮ್ಮ ಆಶಯ, ಅದಕ್ಕೆ ನಮ್ಮ ಪೊಲೀಸ್ ಅಧಿಕಾರಿಗಳು ಹಗಲು ರಾತ್ರಿ ಕೆಲಸವನ್ನು ಮಾಡಿತ್ತಿದ್ದಾರೆ. ಅದಕ್ಕೆ ನಿಮ್ಮ ಬೆಂಬಲ ನಮಗೆ ನೀಡಬೇಕು, ಯಾವುದೇ ಸಮಸ್ಯೆ, ಕುಂದುಕೊರತೆಗಳಿದ್ದಲ್ಲಿ ಅದನ್ನು ಕಾನೂನಾತ್ಮಕವಾಗಿ ಪರಿಹರಿಸಲಾಗುತ್ತದೆ. ಕಾನೂನು ಕೈಗೆತ್ತಿಕೊಳ್ಳುವ ಕೆಲಸವನ್ನು ಯಾರು ಸಹ ಮಾಡಬಾರದು ಎಂದು ತಿಳಿಸಿದರು.

ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ ಸಂತೋಷ್, ಜಿಲ್ಲಾ ವಿಶೇಷ ವಿಭಾಗ ಪೊಲೀಸ್ ನಿರೀಕ್ಷಕ ಇಮ್ರಾನ್ ಬೇಗ್, ಅಬಕಾರಿ ಡಿ.ಎಸ್.ಪಿ ರವಿ ಮರಿಗೌಡರ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಸಿ.ಎಸ್ ಪ್ರಮುತೇಶ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾಗರಾಜ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ರಾಷ್ಟ್ರೀಯ ವಿಜ್ಞಾನ ದಿನಾಚರಣೆಗೆ ಡಾ.ಮಲ್ಲಿಕಾರ್ಜುನಪ್ಪ ಚಾಲನೆ

» ಚಿತ್ರದುರ್ಗ



ಮತ ಧರ್ಮಗಳ ಬೇಲಿಯನ್ನು ಕಿತ್ತು ಹಾಕಿ ಸಾವಿರಾರು ವರ್ಷಗಳಿಂದ ಅನ್ವೇಷಿಸಿಕೊಂಡು ಬಂದಿರುವ ದೇಸಿಯ ತಂತ್ರಜ್ಞಾನವನ್ನು ಆಧುನಿಕ ಸಂಶೋಧನಾ ವಿಧಾನಗಳ ಮೂಲಕ ನಾವಿನ್ಯಗೊಳಿಸಬೇಕೆಂದು ಚಿಂತಕ ಮತ್ತು ಸಾಹಿತಿ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ಹೇಳಿದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಬೆಂಗಳೂರು ಇದರ ಸಹಯೋಗದೊಂದಿಗೆ ಶಿಕ್ಷಕರ ಸರ್ಕಾರಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಉದ್ಘಾಟಿಸಿ ವಿಕಸಿತ ಭಾರತಕ್ಕಾಗಿ ದೇಸೀಯ ತಂತ್ರಜ್ಞಾನ ಎಂಬ ವಿಷಯ ಕುರಿತು ಮಾತನಾಡಿದರು.

ಬಡತನ, ನಿರುದ್ಯೋಗ, ಮಾಲಿನ್ಯ, ಮೌಢ್ಯ ಮತ್ತು ಬ್ರಹ್ಮಾಂಡ ಭ್ರಷ್ಟಾಚಾರವನ್ನು ಹೊತ್ತುಕೊಂಡು ಭಾರತ ಎಂದಿಗೂ ವಿಕಸಿತವಾಗಲು ಸಾಧ್ಯವಿಲ್ಲ. ಅದು ಹಾಗೆ ಆಗಬೇಕಾದರೆ ನಮ್ಮ ಸರ್ವಾಂಗೀಣ ಅಭಿವೃದ್ಧಿ ಸಂವಿಧಾನ ಆಶಿತವಾಗಿರಬೇಕು. ಬಂಡವಾಳ ಮತ್ತು ತಂತ್ರಜ್ಞಾನಗಳಲ್ಲಿ ಸ್ವಾವಲಂಬನೆ ಸಾಧಿಸಬೇಕಾದರೆ ಬುದ್ಧ, ಬಸವ, ಗಾಂಧಿ, ಅಂಬೇಡ್ಕರ್ ಚಿಂತನೆಗಳನ್ನು ತಾತ್ವಿಕ ಅಡಿಪಾಯವಾಗಿಟ್ಟುಕೊಳ್ಳಬೇಕೆಂದು ತಿಳಿಸಿದರು.

ಕೃಷಿ, ಕೈಗಾರಿಕೆ ಮೂಲ ಸೌಲಭ್ಯಗಳು ನೀರಾವರಿ, ಆರೋಗ್ಯಮುಂತಾದ ಕ್ಷೇತ್ರಗಳಲ್ಲಿ ಎಲ್ಲಿ ದೊಡ್ಡ ಪ್ರಮಾಣದ ಉತ್ಪಾದನೆ ಮತ್ತು ವಿವರಣೆಗಳು ಅನಿವಾರ್ಯವೋ ಅವುಗಳನ್ನು ಹೊರತುಪಡಿಸಿ ಉಳಿದ ಸಂದರ್ಭಗಳಲ್ಲಿ ದೇಸೀಯ ತಂತ್ರಜ್ಞಾನ ಬಳಸುವುದರಿಂದ ವ್ಯಕ್ತಿ ಸಂಸ್ಥೆ ಮತ್ತು ದೇಶ ಸಾಲದ ಹೊರೆಯಿಂದ ಹಾಗೂ ಅನಪೇಕ್ಷಿತ ಅವಲಂಬನೆಯಿಂದ ಹೊರಬರಬಹುದು ಎಂದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್ ನಿರ್ದೇಶಕರಾದ ಪ್ರೊ.ಈ.ರುದ್ರಮುನಿ ಮಾತನಾಡಿ ಕರ್ತವ್ಯ ನಿಷ್ಠೆ, ಪ್ರಾಮಾಣಿಕತೆ ಕೊರತೆ ಶಿಕ್ಷಕರುಗಳಲ್ಲಿ ಎದ್ದು ಕಾಣುತ್ತಿದೆ. ಶಿಕ್ಷಕರಾದವರು ಮಕ್ಕಳಿಗೆ ವಿಜ್ಞಾನವನ್ನು ಸರಿಯಾಗಿ ಬೋಧಿಸಬೇಕು. ಇಲ್ಲದಿದ್ದರೆ ನೋಬೆಲ್ ಪಾರಿತೋಷಕಗಳನ್ನು ಪಡೆದುಕೊಳ್ಳುವುದು ಕಠಿಣ. ವೈಜ್ಞಾನಿಕ ಮನೋಭಾವನೆ, ಆಸಕ್ತಿ, ಚಿಂತನೆಯನ್ನು ಮಕ್ಕಳಲ್ಲಿ ಮೂಡಿಸಬೇಕಿದೆ. ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಲ್ಲಿ ವಿಜ್ಞಾನದ ಬಗ್ಗೆ ಅರಿವು ಮೂಡಿಸುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ ಎಂದು ಹೇಳಿದರು.

ಕೇವಲ ಪರೀಕ್ಷಾ ದೃಷ್ಟಿಯಿಂದ ಓದುವುದಕ್ಕಿಂತಲೂ ಮಿಗಿಲಾಗಿ ಪರೀಕ್ಷೆಯನ್ನು ಮೀರಿ ಕಲಿಯುವುದು ಬಹಳಷ್ಟಿದೆ. ಚಿಕ್ಕಂದಿನಲ್ಲಿಯೇ ಮಕ್ಕಳಿಗೆ ಭದ್ರವಾದ ಬುನಾದಿ ಹಾಕಬೇಕಿದೆ. ಶಿಕ್ಷಕರ ಮೇಲೆ ಮಹತ್ತರ ಜವಾಬ್ದಾರಿಯಿದೆ. ಅದರಿಂದ ವಂಚಿತರಾದರೆ ದೇಶಕ್ಕೆ ದ್ರೋಹ ಮಾಡಿದಂತಾಗುತ್ತದೆ ಎಂದು ತಿಳಿಸಿದರು.

ಶಿಕ್ಷಕರ ಸರ್ಕಾರಿ ಶಿಕ್ಷಣ ಮಹಾವಿದ್ಯಾಲಯದ ಪ್ರವಾಚಕರಾದ ಶ್ರೀಮತಿ ಸುಜಾತ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಪ್ರಕೃತಿಯ ವಿರುದ್ದವಾಗಿ ಹೋಗುವ ಬದಲು ಪ್ರಕೃತಿ ನಮಗೆ ನೀಡಿರುವ ಸಂಪತ್ತನ್ನು ಹಾಳು ಮಾಡದೆ ಉಳಿಸಿಕೊಳ್ಳಬೇಕಾಗಿದೆ. ಪ್ರಶಿಕ್ಷಣಾರ್ಥಿಗಳು ವೈಜ್ಞಾನಿಕ ಮನೋಭಾವನೆ ಮೈಗೂಡಿಸಿಕೊಳ್ಳಬೇಕು. ಮಕ್ಕಳ ಮನಸ್ಸಿಗೆ ನಾಟುವ ರೀತಿಯಲ್ಲಿ ಪರಿಣಾಮಕಾರಿ ಬೋಧನೆ ಮುಖ್ಯ. ವಿಜ್ಞಾನ ಎಂದರೆ ಒಂದು ಡಿಸೈನ್, ಮಿಂಚು, ಗುಡುಗಿನಲ್ಲಿ ಒಂದು ರೀತಿಯ ಆಕರ್ಷಣೆಯಿದೆ. ಕವಿ ಹೃದಯ, ವಿಜ್ಞಾನದ ಹೃದಯ ಎರಡು ಒಂದೆ ಎಂದು ನುಡಿದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಕಾರ್ಯದರ್ಶಿ ಹೆಚ್.ಎಸ್.ಟಿ.ಸ್ವಾಮಿ ಮಾತನಾಡಿ ದೇಶಾದ್ಯಂತ ರಾಷ್ಟ್ರೀಯ ವಿಜ್ಞಾನದಿನಾಚರಣೆ ಅತ್ಯಂತ ಸಂಭ್ರಮದಿಂದ ಆಚರಣೆಯಾಗುತ್ತಿದೆ. ಬೆಳಕಿನ ಚದುರತೆ ಕುರಿತು ಸರ್ ಸಿ.ವಿ.ರಾಮನ್‌ರವರು 1928 ರಲ್ಲಿ ಅನೇಕ ಸಂಶೋಧನೆಗಳನ್ನು ನಡೆಸಿ ಪ್ರಬಂಧ ಮಂಡಿಸಿದರು.

## ಫಾಸ್ಟ್ ನ್ಯೂಸ್

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ದಾವಣಗೆರೆನಗರಉಪವಿಭಾಗ2ರವ್ಯಾಪ್ತಿಯ66/11 ಕೆವಿ ಅವರಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರುಡುವ ಎಫ್18–ದುರ್ಗಾಂಬಿಕಾ ಫೀಡರ್ ಮಾರ್ಗದ ವ್ಯಾಪ್ತಿಯಲ್ಲಿ ತುರ್ತು ಕಾಮಗಾರಿಯನ್ನು ನಿರ್ವಹಿಸಬೇಕಾಗಿರುವುದರಿಂದ ಫೆ.29 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಂ.ಬಿ ಕೇರಿ, ಹೊಂಡದ ಸರ್ಕಲ್ ಸುತ್ತಮುತ್ತ, ಕಾಯಿಪೇಟೆ, ಜಾಲಿನಗರ, ಟೀಚರ್ ಕಾಲೋನಿ, ಶಿವಾಜಿ ನಗರ, ಶಿವಾಜಿ ಸರ್ಕಲ್, ಚಲುವಾದಿ ಕೇರಿ, ಇಡಬ್ಲ್ಯೂಎಸ್ ಕಾಲೋನಿ, ಹಳೇಪೇಟೆ, ಬಾರ್‌ಲೈನ್ ರಸ್ತೆ, ಹಾಗೂ ಇತರೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆಂದು ಬೆಸ್ಕಾಂ ತಿಳಿಸಿದೆ.

### ಮಾರ್ಚ್ 3 ರಿಂದ ಪಲ್ಸ್ ಪೋಲಿಯೋ ಕಾರ್ಯಕ್ರಮ

» **ಚಿತ್ರದುರ್ಗ**

ಜಿಲ್ಲೆಯಾದ್ಯಂತ ಮಾರ್ಚ್ 3 ರಿಂದ 6ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಷ್ಟ್ರೀಯ ಪಲ್ಸ್‌ಪೋಲಿಯೋ ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿ ಒಟ್ಟು 1213 ತಂಡಗಳನ್ನು ರಚಿಸಿಕೊಂಡು ಕಳೆದ ಬಾರಿ ನಡೆಸಿದ ಲಸಿಕಾ ಕೇಂದ್ರಗಳಲ್ಲಿ ಈ ಬಾರಿಯೂ ಸಹ ಎರಡು ಹನಿಗಳ ಪೋಲಿಯೋ ಲಸಿಕೆ ಹಾಕಲಾಗುವುದು. ಕಾರ್ಯಕ್ರಮದ ಮೇಲ್ವಿಚಾರಣೆಗಾಗಿ 259 ಮೇಲ್ವಿಚಾರಕರನ್ನು ನೇಮಿಸಿದೆ. ಜಿಲ್ಲೆಯಲ್ಲಿ 0–5 ವರ್ಷದೊಳಗಿನ ಮಕ್ಕಳಿಗೆ ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಹನಿ ಹಾಕಿಸಿದ್ದರೂ ಪುನಃ ಮಾರ್ಚ್ 3 ರಿಂದ 6 ರವರೆಗೆ ಪೋಲಿಯೋ ಹಾಕಿಸಲು 1,35,105 ಮಕ್ಕಳನ್ನು ಗುರುತಿಸಲಾಗಿದೆ. ಕಾರ್ಯಕ್ರಮಕ್ಕೆ ಸಾರ್ವಜನಿಕರು, ಸರ್ಕಾರೇತರ ಸಂಘ ಸಂಸ್ಥೆಗಳು, ಧಾರ್ಮಿಕ ಮುಖಂಡರು, ಚುನಾಯಿತ ಪ್ರತಿನಿಧಿಗಳು ಹಾಗೂ ಇತರೆ ಅಧಿಕಾರಿ ವರ್ಗದವರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯೊಂದಿಗೆ ಸಹಕರಿಸಿ ಪಲ್ಸ್ ಪೋಲಿಯೋ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಪ್ರಕಟಣೆಯಲ್ಲಿ ಕೋರಿದ್ದಾರೆ.

### ನ್ಯಾಯಾಲಯಗಳಿಗೆ ಕಾಪಿಯರ್ ಯಂತ್ರಗಳ ಹೊರಗುತ್ತಿಗೆ: ದರಪಟ್ಟಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿರುವ ವಿವಿಧ ನ್ಯಾಯಾಲಯಗಳಿಗೆ ಕಾಪಿಯರ್ ಯಂತ್ರಗಳನ್ನು ಹೊರಗುತ್ತಿಗೆ ಆಧಾರದಡಿ ಪಡೆಯುವ ಸಲುವಾಗಿ ದರಪಟ್ಟಿ ಆಹ್ವಾನಿಸಲಾಗಿದೆ. ಚಿತ್ರದುರ್ಗದ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು, ಚಿತ್ರದುರ್ಗ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು, ಚಿತ್ರದುರ್ಗ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಸೇರಿದಂತೆ ಹೊಳಲ್ಕೆರೆ, ಚಳ್ಳಕೆರೆ, ಹೊಸದುರ್ಗ, ಹಿರಿಯೂರು, ಮೊಳಕಾಲ್ಮೂರು ನ್ಯಾಯಾಲಯಗಳಿಗೆ ಹೀಗೆ ಒಟ್ಟು 08 ಕಾಪಿಯರ್ ಯಂತ್ರಗಳನ್ನು ಹೊರಗುತ್ತಿಗೆ ಆಧಾರದಡಿ ಪಡೆಯಲು ದರಪಟ್ಟಿ ಆಹ್ವಾನಿಸಿದ್ದು, ಆಸಕ್ತರು ಅನುಬಂಧ–ಎ ನಲ್ಲಿ ತಮ್ಮ ದರಪಟ್ಟಿಯನ್ನು ನಮೂದಿಸಿ, ಸೀಲ್ ಮಾಡಿದ ಲಕೋಟೆಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಚಿತ್ರದುರ್ಗ ಇವರಿಗೆ ಮಾರ್ಚ್ 26 ರಂದು ಮಧ್ಯಾಹ್ನ 02 ಗಂಟೆಯೊಳಗಾಗಿ ಸಲ್ಲಿಸಬೇಕು. ಅದೇ ದಿನ ಸಂಜೆ 5.45 ಗಂಟೆಗೆ ಬಿಡ್‌ದಾರರ ಸಮಕ್ಷಮದಲ್ಲಿ ದರಪಟ್ಟಿ ಲಕೋಟೆ ತೆರೆಯಲಾಗುವುದು. ಆಸಕ್ತರು ಟೆಂಡರ್ ಡಾಕ್ಯುಮೆಂಟ್ ಅನ್ನು https://chitradurga.dcourts.gov.in/ ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

### ಮಾರ್ಚ್ 01 ಮತ್ತು 02ರಂದು ಜಿಲ್ಲಾ ಮಟ್ಟದ ಸರಸ್ ಮೇಳ

» **ಚಿತ್ರದುರ್ಗ**

ಕೌಶಲ್ಯಾಭಿವೃದ್ಧಿ ಉದ್ಯಮಶೀಲತಾ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಸಂಜೀವಿನಿ, ಜಿಲ್ಲಾ ಪಂಚಾಯತ್ ವತಿಯಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ–2024ರ ಅಂಗವಾಗಿ ಸ್ವ ಸಹಾಯ ಗುಂಪುಗಳ ಸದಸ್ಯರು ಉತ್ಪಾದಿಸಿರುವ ವಸ್ತುಗಳ ಪ್ರದರ್ಶನ ಮತ್ತು ಮಾರಾಟಕ್ಕಾಗಿ "ಜಿಲ್ಲಾ ಮಟ್ಟದ ಸರಸ್ ಮೇಳ" ಕಾರ್ಯಕ್ರಮವನ್ನು ಮಾರ್ಚ್ 01 ಮತ್ತು 02ರಂದು ಆಯೋಜಿಸಲಾಗಿದ್ದು, ಮಾರ್ಚ್ 1ರಂದು ಬೆಳಿಗ್ಗೆ 11.30ಕ್ಕೆ ಚಿತ್ರದುರ್ಗ ನಗರದ ವಾಸವಿ ಮಹಲ್‌ನಲ್ಲಿ ಉದ್ಘಾಟನಾ ಕಾರ್ಯಕ್ರಮ ನಡೆಯಲಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿವಹಿಸುವರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು.

# ಜಿಲ್ಲಾ ಮಟ್ಟದ ಮಕ್ಕಳ ಹಬ್ಬ: ಚಿಣ್ಣರ ಪ್ರತಿಭೆ ಅನಾವರಣ

» **ಚಿತ್ರದುರ್ಗ**





ಕರ್ನಾಟಕ ಬಾಲ ವಿಕಾಸ ಅಕಾಡೆಮಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಶಾಲಾ ಶಿಕ್ಷಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಬುಧವಾರ ತರಾಸು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಮಕ್ಕಳ ಹಬ್ಬ, ಚಿಣ್ಣರ ಪ್ರತಿಭೆ ಅನಾವರಣಕ್ಕೆಸಾಕ್ಷಿಯಾಯಿತು. ವೀರಗಾಸೆ, ಕಂಸಾಳೆ, ಕೋಲಾಟ, ಜಾನಪದ ಹಾಗೂ ಚಿತ್ರಗೀತೆಗಳಿಗೆ ನೃತ್ಯ, ನಾಟಕ ಸೇರಿದಂತೆ ಮಕ್ಕಳಿಂದ ಮೂಡಿಬಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಮನ ರಂಜಿಸಿದವು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, ರಾಜ್ಯ ಸರ್ಕಾರ 2009 ರಲ್ಲಿ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯನ್ನು ಧಾರವಾಡದಲ್ಲಿ ಸ್ಥಾಪನೆ ಮಾಡಿದೆ. ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಹಾಗೂ ಸಂಪೂರ್ಣ ವ್ಯಕ್ತಿತ್ವದ ವಿಕಾಸ ಅಕಾಡೆಮಿಯ ಮುಖ್ಯ ಉದ್ದೇಶವಾಗಿದೆ. ಪ್ರತಿವರ್ಷವೂ ಜಿಲ್ಲಾ ಮಟ್ಟದಲ್ಲಿ ಮಕ್ಕಳ ಹಬ್ಬ ಆಯೋಜಿಸುವ ಮೂಲಕ ಅವರ ಪ್ರತಿಭೆ ಅನಾವರಣಕ್ಕೆ ವೇದಿಕೆ ಕಲ್ಪಿಸಿಕೊಡಲಾಗಿದೆ. ಮಕ್ಕಳು ನೀಡುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸ್ಪರ್ಧೆ ಎಂದು ಪರಿಗಣಿಸದೆ, ಭಾಗವಹಿಸಿದ ಎಲ್ಲಾ ಮಕ್ಕಳಿಗೂ ಸ್ಮರಣಿಕೆ ನೀಡಿ ಸನ್ಮಾನಿಸಲಾಗುವುದು. ಕೊವಿಡ್ ಕಾರಣದಿಂದ ನಿಂತು ಹೋಗಿದ್ದ ಮಕ್ಕಳ ಹಬ್ಬಕ್ಕೆ ಮತ್ತೆ ಚಾಲನೆ ನೀಡಲಾಗಿದೆ. ಜಾನಪದ, ಸಾಹಿತ್ಯ, ಕ್ರೀಡೆ, ಸಂಸ್ಕೃತಿ ಮುಂತಾದ ಕ್ಷೇತ್ರಗಳಲ್ಲಿ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಸಮಾಜಕ್ಕೆ ಪರಿಚಯಿಸಲಾಗುತ್ತಿದೆ. ಗ್ರಾಮೀಣ ಮಕ್ಕಳ ಬದುಕನ್ನು ಸಶಕ್ತಗೊಳಿಸಲು ಮತ್ತು ಉನ್ನತಿಗೆ ತರಲು ರಚನಾತ್ಮಕ ಕಾರ್ಯಕ್ರಮಗಳನ್ನು ಅಕಾಡೆಮಿ ವತಿಯಿಂದ ಕೈಗೊಳ್ಳಲಾಗಿದೆ ಎಂದರು.

ಆರ್ಥಿಕವಾಗಿ, ಸಾಮಾಜಿಕವಾಗಿ, ಹಿಂದುಳಿದ ಮಕ್ಕಳನ್ನು ಗುರುತಿಸಿ ಶಿಕ್ಷಣ, ಸಾಹಿತ್ಯ, ಸಂಗೀತ ಮತ್ತು ಕಲೆ ಸೇರಿದಂತೆ ಇತರ ವಿಷಯಗಳಲ್ಲಿ ಅವರಿಗೆ ಸೂಕ್ತ ಪ್ರೋತ್ಸಾಹ ನೀಡಲು ಕಾರ್ಯಕ್ರಮಗಳನ್ನು ಬಾಲ ವಿಕಾಸ ಅಕಾಡೆಮಿ ವತಿಯಿಂದ ಹಮ್ಮಿಕೊಳ್ಳಲಾಗಿದೆ ಎಂದು ಭಾರತಿ ಆರ್ ಬಣಕಾರ್ ತಿಳಿಸಿದರು.

ವೇದಿಕೆ ಕಾರ್ಯಕ್ರಮವನ್ನು ಮಕ್ಕಳಿಂದಲೇ ಉದ್ಘಾಟಿಸಲಾಯಿತು. ನಂತರ ಜಿಲ್ಲೆಯ ವಿವಿಧಡೆಯಿಂದ ಆಗಮಿಸಿದ ಮಕ್ಕಳ ತಂಡಗಳು ಕಂಸಾಳೆ, ವೀರಗಾಸೆ, ರೂಪಕ, ಕೋಲಾಟ, ಚಿತ್ರಗೀತೆ, ದೇಶಭಕ್ತಿ ಗೀತೆ, ಜಾನಪದ ಗೀತೆಗಳಿಗೆ ನೃತ್ಯ ಮಾಡಿದರು. ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು ಬೆಂಕಿಯಲ್ಲಿ ಅರಳಿದ ಹೂ ನಾಟಕ ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ಕಲಾ ತಂಡಳಿಗೆ ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆಗಳನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ, ಸಿಡಿಪಿಓ ಪವಿತ್ರ, ನಿರೂಪಣಾಧಿಕಾರಿ ವಿಜಯಕ್ ಕುಮಾರ್, ಜಿಲ್ಲಾ ಅಂಗವಿಕಲ ಅಭಿವೃದ್ಧಿ ಅಧಿಕಾರಿ ವೀಣಾ, ಶಿಕ್ಷಕರಾದ ಕುಮಾರ್, ಹೊನ್ನಪ್ಪ ಇದ್ದರು.

# ವಿಠ್ಠಲ ದೇವಾಲಯ ಯಥಾಸ್ಥಿತಿಗೆ ಆದೇಶ

## ಸಿಹಿ ಹಂಚಿ ಸಂಭ್ರಮಿಸಿದ ಭಾವಸಾರ ಕ್ಷತ್ರಿಯ ಸಮಾಜದ ಮುಖಂಡರು

» **ಹೊಸದುರ್ಗ**



ಸ್ವಾತಂತ್ರ್ಯ ಬಂದು ಒಂದು ವರ್ಷದೊಳಗಾಗಿ ನಮ್ಮ ಹಿರಿಯರು ಪಟ್ಟಣದ ಗಾಂಧಿ ವೃತ್ತದ ಸಮೀಪದ ದೇವಾಲಯದ ಹೆಸರಿನ ಜಾಗದಲ್ಲಿ ವಿಠ್ಠಲ ದೇವಸ್ಥಾನವನ್ನು ಕಟ್ಟಿದ್ದಾರೆ. ಕೆಲವರು ದೇವಸ್ಥಾನದ ಹೆಸರಿಗಿದ್ದ ಖಾತೆಯನ್ನು ಬದಲಿಸಿ, ಟ್ರಸ್ಟ್ ಹೆಸರಿಗೆ ಮಾಡಿಕೊಂಡಿದ್ದರು. ಆದರೆ, ಇದೀಗ ವಿಠ್ಠಲ ದೇವಾಲಯದ ಖಾತೆಯನ್ನು ಪುನರ್ ಸ್ಥಾಪಿಸಿ, ಯಥಸ್ಥಿತಿ ಕಾಪಾಡಿ ಎಂದು ಹೈಕೋರ್ಟ್ ಆದೇಶ ಮಾಡಿದೆ. 14 ವರ್ಷಗಳ ಸತ್ಯದ ನಮ್ಮ ಹೋರಾಟಕ್ಕೆ ಜಯ ಸಿಕ್ಕಿದೆ ಎಂದು ಭಾವಸಾರ ಕ್ಷತ್ರಿಯ ಸಮಾಜದ ಮುಖಂಡ ಉಮೇಶ್ ಗುಜ್ಜಾರ್ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 1948ರಲ್ಲಿ ವಿಠ್ಠಲ ದೇವಾಲಯವನ್ನು ನಿರ್ಮಾಣ ಮಾಡಲಾಗಿದೆ. ಕೆಲವರು ದೇವಸ್ಥಾನ ಅಭಿವೃದ್ಧಿ ಪಡಿಸಲಾಗುವುದು ಎಂದು ದೇವರ ಹೆಸರಿಗಿದ್ದ ಖಾತೆಯನ್ನು 2001 ರಲ್ಲಿ ಬದಲಾಯಿಸಿ, ಭಾವಸಾರ ಕ್ಷತ್ರಿಯ ಸಮಾಜ ಟ್ರಸ್ಟ್ (ರಿ) ಹೊಸದುರ್ಗ ಇವರ ಹೆಸರಿಗೆ ಮಾಡಿಕೊಂಡಿದ್ದರು. 2019 ರಲ್ಲಿ ಪುರಸಭೆಯಿಂದ ತಮ್ಮ ಹೆಸರಿಗೆ ದೇವಾಲಯದ ಅಸಿಸ್ಮೆಂಟನ್ನು ಇ– ಸ್ವತ್ತು ಮಾಡಿಕೊಂಡಿದ್ದಾರೆ. 2001 ರಿಂದ 2024 ರವರೆಗೆ ದೇವಾಲಯದ ಲೆಕ್ಕ ಪತ್ರಗಳನ್ನು ಕೇಳಿದರೂ, ಸಂಪೂರ್ಣವಾದ ಲೆಕ್ಕ ಪತ್ರಗಳನ್ನು ನೀಡಿಲ್ಲವೆಂದು ಆರೋಪಿಸಿದರು.

ಭಾವಸಾರ ಕ್ಷತ್ರಿಯ ಸಮಾಜ ಟ್ರಸ್ಟ್ ನಲ್ಲಿರುವವರು ವಿಠ್ಠಲ ದೇವಾಲಯದ 14 ವಾಣಿಜ್ಯ ಮಳಿಗೆಗಳನ್ನು ತಮಗೆ ಬೇಕಾದ ಹಣವಂತರಿಗೆ ಬಾಡಿಗೆ ನೀಡಿದ್ದಾರೆ. ಬಡವರಿಗೆ, ಶ್ರಮಿಕರಿಗೆ ದೇವಾಲಯದ ಮಳಿಗೆಗಳನ್ನು ಬಾಡಿಗೆಗೆ ನೀಡಬೇಕು. ಹೈಕೋರ್ಟ್ ಆದೇಶದಂತೆ ಈಗಾಗಲೇ ಟ್ರಸ್ಟ್ ಹೆಸರಿಗಿದ್ದ ಖಾತೆಯನ್ನು ವಿಠ್ಠಲ ದೇವಾಲಯ ಹೆಸರಿಗೆ ಪುನರ್ ಸ್ಥಾಪಿಸಲಾಗಿದೆ. ಇನ್ನೂ ದೇವಾಲಯಕ್ಕೆ ಸಂಬಂಧಪಟ್ಟಮಳಿಗೆಗಳುಮತ್ತುಸಮುದಾಯದ ಭವನದ 24 ವರ್ಷದ ಬಾಡಿಗೆ ಹಣದ ಲೆಕ್ಕ ಪತ್ರ, ಹುಂಡಿಯ ಕಾಣಿಕೆ ಮತ್ತು ದೇವರ ಚಿನ್ನಾಭರಣವನ್ನು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ದೇವಾಲಯಕ್ಕೆ ಕೊಡಿಸಬೇಕೆಂದು ಒತ್ತಾಯಿಸಿದರು.

ಮುಖಂಡ ಮೋಹನ್ ಗುಜ್ಜಾರ್ ಮಾತನಾಡಿ, ವ್ಯಕ್ತಿಯೊಬ್ಬ ದೇವಾಲಯದ ಆಸ್ತಿಯನ್ನು ಅಕ್ರಮವಾಗಿ ತಮ್ಮ ಹೆಸರಿಗೆ ಮಾಡಿಕೊಂಡು ವಂಚನೆ ಮಾಡಿದ್ದಾನೆ. ದೇವಾಲಯಕ್ಕೆ 6 ರಿಂದ 8 ಕೋಟಿ ಹಣವನ್ನು ವಂಚಿಸಿದ್ದಾನೆ. ಈ ಸಂಬಂಧಪಟ್ಟಂತೆ ನಮ್ಮಲ್ಲಿ ಎಲ್ಲಾ ದಾಖಲೆಗಳಿವೆ. ಸೌಹಾರ್ದಯುತವಾಗಿ ಒಳ್ಳೆಯ ಮಾತಿನಿಂದ ದೇವಾಲಯದ ಲೆಕ್ಕಪತ್ರಗಳನ್ನು ಕೇಳಿದವರ ಮೇಲೆ ಹಣಬಲ ಮತ್ತು ರಾಜಕೀಯ ಬಲದಿಂದ ಕೇಸ್ ಹಾಕುತ್ತಾ, ದೌರ್ಜನ್ಯ ಮಾಡುತ್ತಿದ್ದಾನೆ. ಈತನ ಮೇಲೆ ಪ್ರಕರಣ ದಾಖಲಿಸಿ, ಕ್ರಮ ತೆಗೆದುಕೊಳ್ಳುವಂತೆ ಪೋಲಿಸ್ ಠಾಣೆಗೆ ದೂರು ನೀಡಲಾಗಿದೆ ಎಂದು ಹೇಳಿದರು.

ಈ ವೇಳೆ ಸುದ್ದಿಗೋಷ್ಠಿಯಲ್ಲಿ ಹೊಸದುರ್ಗ ತಾಲ್ಲೂಕು ಭಾವಸಾರ ಕ್ಷತ್ರಿಯ ಸಮಾಜದ ಮುಖಂಡರಾದ ಮುಕುಂದರಾವ್, ಸುರೇಶ್ ಬಾಬು, ವಾಸುದೇವರಾವ್, ರವಿ ಕಿಶನ್, ಗಣೇಶ್, ಹರೀಶ್ ಮಹಳತ್ಕರ್, ರಾಮಚಂದ್ರ ಮತ್ತು ರಾಘು ಮಹಳತ್ಕರ್ ಸೇರಿದಂತೆ ಇತರರಿದ್ದರು.

# ಅಪರಿಚಿತ ವ್ಯಕ್ತಿಗಳ ಚಲನವಲನದ ಮಾಹಿತಿ ನೀಡಿ: ಪಿಐ ಕುಮಾರ್



» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ಬ್ಯಾಂಕ್‌ಗಳಲ್ಲಿ ಎಟಿಎಂ ಕೌಂಟರ್ ಮೂಲಕ ಗ್ರಾಹಕರನ್ನುವಂಚಿಸಿ ಹಣ ಪಡೆಯುವುದಲ್ಲದೆ, ಬ್ಯಾಂಕ್ ಖಾತೆಯಲ್ಲಿರುವ ಹಣವನ್ನು ಅನುಮಾನಬಾರಂತೆ ದೋಚುವ ಪ್ರಕರಣ ಹೆಚ್ಚುತ್ತಿದ್ದು, ಈ ಬಗ್ಗೆ ಬ್ಯಾಂಕ್ ಅಧಿಕಾರಿಗಳು ಜಾಗ್ರತೆ ವಹಿಸುವಂತೆ ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್ ತಿಳಿಸಿದರು.

ಅವರು, ಬುಧವಾರ ಪೊಲೀಸ್ ಠಾಣಾ ಕಚೇರಿಯಲ್ಲಿ ನಗರ ವ್ಯಾಪ್ತಿಯ ಬ್ಯಾಂಕ್ ಅಧಿಕಾರಿಗಳ ಜಾಗೃತಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಪ್ರತಿಯೊಂದು ಬ್ಯಾಂಕ್ ಸಿಸಿ ಕ್ಯಾಮರವನ್ನು ಕಡ್ಡಾಯವಾಗಿ ಹೊಂದಿರಬೇಕು, ಬ್ಯಾಂಕ್‌ಗೆ ಆಗಮಿಸುವ ಗ್ರಾಹಕರ ಚಲನವಲನಗಳನ್ನು ವೀಕ್ಷಿಸಲು ಸಿಸಿ ಕ್ಯಾಮರ ಅವಶ್ಯಕತೆ ಇದೆ. ಅವುಗಳ ಕಾರ್ಯನಿರ್ವಹಣೆಯ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಪ್ರತಿನಿತ್ಯ ಪರಿಶೀಲನೆ ನಡೆಸಬೇಕು, ವಿಶೇಷವಾಗಿ ಮುಗ್ಧ ಜನರನ್ನು ವಂಚಿಸುವ ನಕಲಿ ಜನರ ಬಗ್ಗೆ ಗ್ರಾಹಕರಿಗೂ ತಿಳುವಳಿಕೆ ನೀಡಬೇಕು ಎಂದರು. ಬ್ಯಾಂಕ್‌ನಿಂದ ಹೆಚ್ಚು ಹಣ ಪಡೆಯುವವರಿಗೆ ಸುರಕ್ಷತೆಕ್ರಮದ ಬಗ್ಗೆ ಮಾಹಿತಿ ನೀಡಿ. ವಿಶೇಷವಾಗಿ ಅಪರಿಚಿತ ವ್ಯಕ್ತಿಗಳ ಚಲನವಲನದ ಬಗ್ಗೆ ಗಮಹರಿಸಿ, ಬ್ಯಾಂಕ್ ಖಾತೆಯನ್ನು ಹೊಂದಿದ ವ್ಯಕ್ತಿಯೇ ಬ್ಯಾಂಕ್‌ಗೆ ಆಗಮಿಸಿದರೂ ಸೂಕ್ತ ದಾಖಲಾತಿಗಳನ್ನು ಪರಿಶೀಲಿಸಿ ನಂತರ ಹಣ ಪಡೆಯಲು ಅವಕಾಶ ಮಾಡಬೇಕು. ಎಟಿಎಂ ಕೌಂಟರ್ ಬಳಿ ಸಿಸಿ ಕ್ಯಾಮರದೊಂದಿಗೆ ಸೈರನ್ ಅಳವಡಿಸಬೇಕು, ಯಾವುದೇ ಸಂದರ್ಭದಲ್ಲಿ ಅಪರಿಚಿತ ವ್ಯಕ್ತಿಗಳು ಬ್ಯಾಂಕ್‌ಗೆ ಆಗಮಿಸಿ ಗ್ರಾಹಕರಿಗೆ ಮೋಸ ಮಾಡಲು ಯತ್ನಿಸಿದರೆ ಅಂತಹವರ ಬಗ್ಗೆ ಜಾಗೃತಿ ವಹಿಸಿ, ಯಾವುದೇ ಅನುಮಾನ ವ್ಯಕ್ತವಾದಲ್ಲಿ ಪೊಲೀಸರನ್ನು ಸಂಪರ್ಕಿಸುವಂತೆ ಸೂಚನೆ ನೀಡಿದರು.

## ಪ್ರಮುಖ ಸುದ್ದಿ

### ಶಾಂತಿಸಾಗರದಲ್ಲಿ ನೀರಿನ ಸಂಗ್ರಹ ಇಳಿಕೆ, ಮುಂದಿನ 20 ದಿನಗಳ ಬಳಕೆಗೆ ಲಭ್ಯ

# ಅನಧಿಕೃತ ಪಂಪ್‌ಸೆಟ್ ತೆರವಿಗೆ ಜಿಲ್ಲಾಧಿಕಾರಿ ಸೂಚನೆ

» **ದಾವಣಗೆರೆ**



ಶಾಂತಿಸಾಗರದ ಮೂಲಕ ಚನ್ನಗಿರಿ, ಚಿತ್ರದುರ್ಗ, ಹೊಳಲ್ಕೆರೆ, ಜಗಳೂರು ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಗೆ ಬಳಕೆಯಾಗುತ್ತಿದ್ದು ಮುಂದಿನ 20 ದಿನಗಳಿಗೆ ಮಾತ್ರ ನೀರಿನ ಸಂಗ್ರಹವಿದ್ದು ಬೇಸಿಗೆಯಲ್ಲಿ ಸಮರ್ಪಕ ಕುಡಿಯುವ ನೀರು ಪೂರೈಕೆಗಾಗಿ ಅನಧಿಕೃತವಾಗಿ ಅಳವಡಿಸಿರುವ ಪಂಪ್‌ಸೆಟ್‌ಗಳನ್ನು ತೆರವು ಮಾಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಬೆಸ್ಕಾಂ, ಗ್ರಾಮೀಣ ಕುಡಿಯುವ ನೀರು ವಿಭಾಗದ ಇಂಜಿನಿಯರ್‌ಗಳಿಗೆ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಸೂಚನೆ ನೀಡಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿಪತ್ತು ನಿರ್ವಹಣೆ ಕುರಿತಂತೆ ಉಪವಿಭಾಗಾಧಿಕಾರಿಗಳು, ತಹಶೀಲ್ದಾರರು, ಗ್ರಾಮೀಣ ಕುಡಿಯುವ ನೀರು ಪೂರೈಕೆ ಇಂಜಿನಿಯರ್, ಪಶುಸಂಗೋಪನಾ ಇಲಾಖೆ, ಬೆಸ್ಕಾಂ ಅಧಿಕಾರಿಗಳೊಂದಿಗೆ ನಡೆಸಿದ ವೀಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಮಾತನಾಡಿದರು. ಶಾಂತಿಸಾಗರದಿಂದ ಎರಡು ಜಿಲ್ಲೆಗಳ ಪ್ರಮುಖ ಪಟ್ಟಣ, ನಗರಗಳಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಆದರೆ ಕೆರೆಗೆ ಅನಧಿಕೃತವಾಗಿ ಪಂಪ್‌ಸೆಟ್ ಅಳವಡಿಸಿಕೊಂಡು ಅಕ್ರಮವಾಗಿ ನೀರೆತ್ತಲಾಗುತ್ತಿದೆ. ಇದರಿಂದ ನೀರಿನ ಸಂಗ್ರಹತುಂಬಾ ಇಳಿಕೆಯಾಗಿರುವುದರಿಂದ ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಸಮಸ್ಯೆಯಾಗಲಿದೆ ಎಂದರು.

ಬೆಸ್ಕಾಂನಿಂದ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿಕೊಟ್ಟಿದ್ದರಿಂದ ರೈತರು ಅನಧಿಕೃತವಾಗಿ ಕೆರೆಯಲ್ಲಿನ ನೀರನ್ನು ಬಳಕೆ ಮಾಡುತ್ತಿದ್ದಾರೆ. ಅನಧಿಕೃತವಾಗಿ ಅಳವಡಿಸಿರುವವಿದ್ಯುತ್‌ಪರಿವರ್ತಕಗಳನ್ನು ತೆರವು ಮಾಡಲು ಮತ್ತು ವಿದ್ಯುತ್ ಪೂರೈಕೆಯನ್ನು ಸ್ಥಗಿತಗೊಳಿಸಲು ಬೆಸ್ಕಾಂ ಇಂಜಿನಿಯರ್‌ಗೆ ಸೂಚನೆ ನೀಡಿದರು. ಶಾಂತಿಸಾಗರದಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿರುವುದರಿಂದ ಕಾಲುವೆ ಮೂಲಕ ನೀರು ಶೇಖರಣೆಗೆ ಕ್ರಮವಹಿಸಲಾಗುತ್ತದೆ ಎಂದರು.

ಟ್ಯಾಂಕರ್ ಮೂಲಕ ನೀರು ಪೂರೈಕೆಗೆ ಸೂಚನೆ; ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆಯಾದಲ್ಲಿ ಖಾಸಗಿ ಕೊಳವೆಬಾವಿ ಸಿಗದಿದ್ದಲ್ಲಿ ತಕ್ಷಣವೇ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಮಾಡಬೇಕು. ದೂರದ ಆಧಾರದ ಮೇಲೆ ಈಗಾಗಲೇ ಪ್ರತಿ ಟ್ಯಾಂಕರ್‌ಗೆ ರೂ.500, 600, ಹಾಗೂ ರೂ.900 ರವರೆಗೆ ದರ ನಿಗದಿ ಮಾಡಲಾಗಿದೆ. ಟೆಂಡರ್ ಕರೆಯಲಾಗಿಲ್ಲ ಎಂದು ತಾಂತ್ರಿಕ ನೆಪವೊಡ್ಡಿ ಜನರಿಗೆ ನೀರು ಕೊಡದಿರುವುದನ್ನು ಗಂಭೀರವಾಗಿ ಪರಿಗಣಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಕೇಂದ್ರಸ್ಥಾನ ಬಿಡುವಂತಿಲ್ಲ; ಬೇಸಿಗೆ ಆರಂಭವಾಗಿದ್ದು ಕುಡಿಯುವ ನೀರಿನ ಸಮಸ್ಯೆ, ಮೇವಿನ ಸಮಸ್ಯೆ, ಸಾಂಕ್ರಾಮಿಕ ಕಾಯಿಲೆಗಳು ಸೇರಿದಂತೆ ವಿಕೋಪದಿಂದಾಗುವ ಸಮಸ್ಯೆಗಳನ್ನು ಎದುರಿಸಲು ಅಧಿಕಾರಿಗಳು ಸದಾ ಸನ್ನದ್ಧರಾಗಿರಬೇಕು. ಯಾವುದೇ ಅಧಿಕಾರಿಗಳು ಕೇಂದ್ರಸ್ಥಾನ ಬಿಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಎಲ್ಲೆಲ್ಲಿ ಕುಡಿಯುವ ನೀರಿನ ಕೊಳವೆಬಾವಿಗಳಲ್ಲಿ ನೀರು ಕಡಿಮೆಯಾಗಿವೆ ಎಂದು ಪರಿಶೀಲನೆ ನಡೆಸಿ ಆಳಕ್ಕೆ ಕೊರೆಯಬೇಕಾಗಿದ್ದಲ್ಲಿ ಅಂತಹ ಕೊಳವೆಬಾವಿಗಳ ವಿವರದೊಂದಿಗೆ ಪ್ರಸ್ತಾವನೆಯನ್ನು ಆಯಾ ತಾಲ್ಲೂಕು ತಹಶೀಲ್ದಾರರಿಗೆ ಸಲ್ಲಿಸಬೇಕು ಎಂದರು.

ಸಹಾಯವಾಣಿ ಸ್ಥಾಪನೆ; ಬರಗಾಲ ಇರುವುದರಿಂದ ಎಲ್ಲಾ ತಾಲ್ಲೂಕು ಕಚೇರಿಗಳಲ್ಲಿ ತಕ್ಷಣವೇ ಸಹಾಯವಾಣಿ ಆರಂಭಿಸಬೇಕು. ಜನರುಕುಡಿಯುವನೀರಿನ ಸಮಸ್ಯೆ, ಮೇವಿನ ಸಮಸ್ಯೆಯಾದಲ್ಲಿ ಮತ್ತು ಇತರೆ ಸಮಸ್ಯೆಗಳಿದ್ದಲ್ಲಿ ಸಹಾಯವಾಣಿಗೆ ಕರೆ ಮಾಡಿ ಪರಿಹಾರ ಕಂಡುಕೊಳ್ಳುವರು.

ಖಾಸಗಿ ಕೊಳವೆಬಾವಿಗಳಿಂದ ನೀರು ಪೂರೈಕೆ; ಜಿಲ್ಲೆಯಲ್ಲಿ 14 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 22 ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಅದರಲ್ಲಿ ಚನ್ನಗಿರಿ 2 ಪಂಚಾಯಿತಿ 7 ಕೊಳವೆಬಾವಿ 3 ಗ್ರಾಮಗಳು, ದಾವಣಗೆರೆ 2 ಗ್ರಾ.ಪಂ.ಗಳಲ್ಲಿ 3 ಕೊಳವೆಬಾವಿ 3 ಗ್ರಾಮ, ಹರಿಹರ 3 ಗ್ರಾ.ಪಂ.ಗಳಲ್ಲಿ 4 ಕೊಳವೆಬಾವಿ 4 ಗಾಮಗಳು, ಹೊನ್ನಾಳಿ 4 ಗ್ರಾ.ಪಂ. 4 ಕೊಳವೆಬಾವಿ 3 ಗ್ರಾಮಗಳು, ಜಗಳೂರು 3 ಗ್ರಾ.ಪಂ. ವ್ಯಾಪ್ತಿಯಲ್ಲಿ 4 ಖಾಸಗಿ ಕೊಳವೆಬಾವಿಗಳ ಮೂಲಕ 4 ಗ್ರಾಮಗಳಲ್ಲಿ ನೀರು ಪೂರೈಕೆ ಮಾಡಲಾಗುತ್ತಿದೆ.

ಮುಂದಿನ ದಿನಗಳಲ್ಲಿ ಸಮಸ್ಯೆಯಾಗಬಹುದಾದ 169 ಗ್ರಾಮಗಳನ್ನು ಗುರುತಿಸಲಾಗಿದೆ. ಇದಕ್ಕಾಗಿ 171 ಕಡೆ ಖಾಸಗಿ ಬೋರ್‌ವೆಲ್ ಗುರುತಿಸಿ 89 ಖಾಸಗಿ ಕೊಳವೆಬಾವಿಗಳನ್ನು ಗುರುತಿಸಿ ಒಡಂಬಡಿಕೆ ಮಾಡಿಕೊಳ್ಳಲಾಗಿದೆ.

18.77 ಕೋಟಿ ಲಭ್ಯ; ಬರಗಾಲ ಎದುರಿಸಲು ತುರ್ತು ಕೆಲಸಗಳಿಗಾಗಿ ಅಂದರೆ ಕುಡಿಯುವ ನೀರು, ಮೇವು ಪೂರೈಕೆಗಾಗಿ ಜಿಲ್ಲಾಧಿಕಾರಿಗಳ ಖಾತೆಯಲ್ಲಿ ರೂ.16.10 ಕೋಟಿ, ಮತ್ತು ಎಲ್ಲಾ ತಹಶೀಲ್ದಾರರ ಖಾತೆಯಲ್ಲಿ ರೂ.2.67 ಕೋಟಿ ಹಣವಿದ್ದು ಯಾವುದೇ ಅನುದಾನದ ಕೊರತೆ ಇರುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವೀಡಿಯೋ ಕಾನ್ಫರೆನ್ಸ್‌ನಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಅಫ್ರೀನ್ ಭಾನು ಎಸ್.ಬಳ್ಳಾರಿ, ಉಪವಿಭಾಗಾಧಿಕಾರಿ ಅಭಿಷೇಕ್, ದುರ್ಗಶ್ರೀ, ಡಿಡಿಎಲ್‌ಆರ್ ಭಾವನಾ ಹಾಗೂ ತಹಶೀಲ್ದಾರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T